# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 248 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 22–04–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 248 | Title- Code: KARKAN 28269 | Chitradurga | Date: 22-04-2024 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ದಲಿತರಿಗೆ ಕಾರಜೋಳ ಮಗ್ಗಲ ಮುಳ್ಳು: ಅನಂತನಾಯ್ಕ 2

ವಾಲ್ಮೀಕಿ ಸಮುದಾಯಕ್ಕೆ ಮೀಸಲಾತಿ ಕಲ್ಪಿಸಿದ ಕೀರ್ತಿ ಬಿಜೆಪಿಗೆ 3

ಕ್ಯೆಹಿಡಿಯಲಿವೆ ಐದು ಗ್ಯಾರೆಂಟಿ, ಗೆಲುವು ನಮ್ಮದೇ: ಶಾಸಕ ರಘುಮೂರ್ತಿ 4



ಸುದ್ದಿ, ಜಾಹಿರಾತಿಗೆ 9686622252


# 23ಕ್ಕೆ ಚಿತ್ರದುರ್ಗಕ್ಕೆ ಪ್ರಿಯಾಂಕ ಭೇಟಿ

» **ಚಿತ್ರದುರ್ಗ**

ಕ್ಷೇತ್ರದ ತುಂಬಾ ಕಾಂಗ್ರೆಸ್ ಅಲೆ ಇದ್ದು, ಈ ಬಾರಿ ಕಾಂಗ್ರೆಸ್ ಅಭ್ಯರ್ಥಿ ಬಿ ಎನ್ ಚಂದ್ರಪ್ಪ ಅವರು ಒಂದು ಲಕ್ಷ ಮತಗಳ ಅಂತರದಿಂದ ಗೆಲ್ಲುತ್ತಾರೆ ಎಂದು ಮಾಜಿ ಸಚಿವ ಹೆಚ್. ಆಂಜನೇಯ ಭವಿಷ್ಯ ನುಡಿದಿದ್ದಾರೆ.





ಚಿತ್ರದುರ್ಗದಲ್ಲಿ ಡಿಸಿಸಿ ಕಚೇರಿಯಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತಾಡಿದ ಅವರು. ಜನರು ಭಾಗ್ಯಗಳಿಂದ ಸಂತೋಷವಾಗಿದ್ದಾರೆ.

ನಮಗೆ ಈ ಸರ್ಕಾರ ಬೇಕು ಎಂದು ಹೇಳುತ್ತಿದ್ದಾರೆ. ಮೋದಿ ಗ್ಯಾರಂಟಿಯಲ್ಲಿ ಜನರಿಗೆ ಉಪಯೋಗವಾಗುವಂತ ಯಾವುದೇ ಯೋಜನೆಗಳನ್ನು ಘೋಷಣೆ ಮಾಡಿಲ್ಲ. ಹಿಂದು ಮುಸ್ಲಿಂ ಧರ್ಮದ ಮೇಲೆ ರಾಜಕಾರಣ ಮಾಡದೆ, ಬಡವರಿಗೆ, ರೈತರಿಗೆ ಯುವ ಜನರಿಗೆ ಉಪಯೋವಾಗುವಂತ ಕೆಲಸ ಮಾಡಿ, ಇದು ಬಿಟ್ಟು ಹಳೆ ಯೋಜನೆಗಳನ್ನು ಜಾತಿ ಮಾಡುತ್ತೇವೆ ಎಂದು ಹೇಳುತ್ತಿದ್ದಿರಿ, ದೇಶದ ಭದ್ರತೆಯನ್ನು ಕಾಂಗ್ರೆಸ್ ಮಾಡಿದೆ, ಇದನ್ನು ನೀವು ನೋಡಿಕೊಂಡರೆ ಸಾಕು. ಬಿಜೆಪಿಯವರಿಗೆ ಜನರ ಮತ ಕೇಳುವ ನೈತಿಕ ಹಕ್ಕಿಲ್ಲ. ನಾವು ನುಡಿದಂತೆ ನಡೆದಿದ್ದೇವೆ. ಅಭಿವೃದ್ಧಿ ಕೆಲಸ ಮಾಡುತ್ತಿದ್ದೇವೆ. ಸಿದ್ದರಾಮಯ್ಯ ಉತ್ತಮ ಆಡಳಿತ ನೀಡುತ್ತಿದ್ದಾರೆ ಜಿಲ್ಲೆಯಲ್ಲಿ ನಮ್ಮದೆ ಸಂಪ್ರದಾಯಿಕ ಮತಗಳಿವೆ, ಅವುಗಳ ಜೊತೆಗೆ ತಪ್ಪಾಗಿದ್ದರೆ, ಸರಿಪಡಿಸಿಕೊಂಡು ಮುನ್ನೆಡೆಯುತ್ತೇವೆ ಎಂದರು.

ಇಂದಿರಾ ಗಾಂಧಿಯ ರೀತಿಯಲ್ಲಿ ರಾಷ್ಟ್ರದ ಗಮನ ಸೆಳೆಯುತ್ತಿರುವ ಪ್ರಿಯಾಂಕ ಗಾಂಧಿ ಹಾಗೂ ಸಿದ್ದರಾಮಯ್ಯ ಅವರು, ಇದೇ 21 ರಂದು ಬೆಳಗ್ಗೆ 11ಕ್ಕೆ ಹಳೆ ಮಾಧ್ಯಮಿಕ ಶಾಲಾ ಆವರಣದಲ್ಲಿ ಬಿ ಎನ್ ಚಂದ್ರಪ್ಪ ಅವರ ಪರ ಮತಯಾಚನೆ ಮಾಡಲಿದ್ದಾರೆ. ಲಕ್ಷಾಂತರ ಸಂಖ್ಯೆಯಲ್ಲಿ ಜನರು ಬಂದು ಭಾಗವಹಿಸಬೇಕೆಂದು ಮನವಿ ಮಾಡಿದರು.

ಇದೇ ಸಮಯದಲ್ಲಿ ಮಾತಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ತಾಜ್ ಪೀರ್ ಮಾತಾಡಿ, ಕಾಂಗ್ರೆಸ್ ನ ಯಾವ ನಗರಸಭಾ ಸದಸ್ಯರು ಬಿಜೆಪಿಗೆ ಸೇರಿಲ್ಲ, ಇನ್ನು ಗ್ಯಾರಂಟಿ ಕಾರ್ಡ್ ನೀಡುವಾಗ ಯಾವುದೇ ಚುನಾವಣೆ ಅಕ್ರಮ ಮಾಡಿಲ್ಲ. ಫಲಾನುಭವಿಗಳ ಹೆಸರು ಬರೆದುಕೊಳ್ಳಲು ಆಧಾರ್ ಕಾರ್ಡ್ ತೆಗೆದುಕೊಂಡು ವಾಪಾಸ್ಸು ನೀಡಲಾಗಿದೆ. ಇನ್ನು ಸ್ಥಳೀಯ ಶಾಸಕರಾದ ವೀರೇಂದ್ರ ಪಪ್ಪಿ ಅವರು ಹಾಗೂ ಕಾರ್ಯಕರ್ತರು, ಮನೆ ಮನೆಗೂ ಭೇಟಿ ಪ್ರಚಾರ ಕಾರ್ಯ ಕೈಗೊಂಡಿದ್ದಾರೆ.

ಈ ಸಮಯದಲ್ಲಿ ಜಿಲ್ಲಾ ಕಾಂಗ್ರೆಸ್ ಮುಖಂಡ ಕೃಷ್ಣಮೂರ್ತಿ, ಸಂಪತ್ ಕುಮಾರ್, ಜಿಲ್ಲಾ ಪಂಚಾಯಿತಿ ಸದಸ್ಯರಾದ ನರಸಿಂಹ ಮೂರ್ತಿ, ಲಿಡ್ಕರ್ ಮಾಜಿ ಅಧ್ಯಕ್ಷ ಓ ಶಂಕರ್, ಡಿಎನ್ ಮೈಲಾರಪ್ಪ, ಇತರರಿದ್ದರು.

### ನಗರಂಗೆರೆ ಪ್ರಚಾರ ಸಭೆಯಲ್ಲಿ ಶಾಸಕ ರಘುಮೂರ್ತಿ

# ಬಡಜನರ ಹಿತರಕ್ಷಿಸುವಲ್ಲಿ ಕಾಂಗ್ರೆಸ್ ಮುಂದು

» **ಚಳ್ಳಕೆರೆ**

ರಾಜ್ಯದಲ್ಲಿ ಕಳೆದ ಹನ್ನೊಂದು ತಿಂಗಳಿನಿಂದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ಐದು ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ಕಡುಬಡವರ ಬದುಕಿಗೆ ಆಧಾರವಾಗಿದೆ. ಬಿಜೆಪಿ ಪಕ್ಷದಂತೆ ಸುಳ್ಳು ಆಶ್ವಾನೆಯನ್ನು ನೀಡದೆ ಜನರಿಗೆ ನೀಡಬೇಕಾದ ಸೌಲಭ್ಯಗಳನ್ನು ನೀಡಲು ನಮ್ಮ ಪಕ್ಷ ಸದಾ ಮುಂದು. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪನವರಿಗೆ ಮತ ನೀಡುವ ಮೂಲಕ ಚಿತ್ರದುರ್ಗ ಜಿಲ್ಲೆ ಸಮಗ್ರ ಅಭಿವೃದ್ದಿಗೆ ಸಹಕಾರ ನೀಡಬೇಕೆಂದು ಶಾಸಕ ಟಿ.ರಘುಮೂರ್ತಿಮನವಿ ಮಾಡಿದರು.

ಅವರು, ಶನಿವಾರ ನಗರಂಗೆರೆ ಗ್ರಾಮದಲ್ಲಿ ಚುನಾವಣಾ ಪ್ರಚಾರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ನಗರಂಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಗರಂಗೆರೆ, ಸಿದ್ದಾಪುರ, ನರಹರಿನಗರ, ಗಾನಪ್ಪನಹಟ್ಟಿ, ಲಕ್ಷ್ಮಿಪುರ, ಹೊಟ್ಟೆಪ್ಪನಹಳ್ಳಿ ಮುಂತಾದ ಗ್ರಾಮಗಳಲ್ಲಿ ಅಭ್ಯರ್ಥಿಪರ ಮತಯಾಚನೆ ಮಾಡಿದರು. ಲೋಕಸಭಾ ಚುನಾವಣೆ ಮತದಾನ ನಡೆಯಲು ಇನ್ನೂ ಕೇವಲ ಆರು ದಿನ ಬಾಕಿ ಇವೆ, ಈಗಾಗಲೇ



ಕ್ಷೇತ್ರದಾದ್ಯಂತ ಎರಡು ಸುತ್ತಿನ ಪ್ರಚಾರವನ್ನು ಮುಗಿಸಿ ಮತದಾರರ ಒಲವನ್ನು ಗಳಿಸಲು ಕಾಂಗ್ರೆಸ್ ಪಕ್ಷ ಸಫಲವಾಗಿದೆ. ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅಭಿವೃದ್ಧಿ ಪರ ಚಿಂತನೆಗಳನ್ನು ಮೈಗೂಡಿಸಿಕೊಂಡಿರುವ ವ್ಯಕ್ತಿ ಅವರಿಗೆ ಮತ ನೀಡಿ ಎಂದರು. ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಸಿ.ಓಬಯ್ಯ ಮಾತನಾಡಿ, ಸುಮಾರು 120 ವರ್ಷಗಳ ಇತಿಹಾಸವಿರುವ ಏಕೈಕ ಪಕ್ಷ ಕಾಂಗ್ರೆಸ್ ಪಕ್ಷ. ಇಂದಿರಾಗಾಂಧಿಯವರ ಗರೀಭಿ ಹಟಾವೋ ದೇಶದಲ್ಲಿ ಬಡತನ ನಿರ್ಮೂಲನೆಗೆ ನಾಂದಿಯಾಯಿತು. ಕಾಂಗ್ರೆಸ್ ಪಕ್ಷ ಮಾಡಿದ ಯಾವುದೇ ಅಭಿವೃದ್ಧಿ ಕಾರ್ಯವನ್ನು ಬಿಜಪಿ ಇಂದಿಗೂ ಮಾಡಿಲ್ಲ. ಸುಳ್ಳು ಪ್ರಚಾರಕ್ಕೆ ಜನರು ಮರುಳಾಗದೆ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

ಹಿರಿಯ ಕಾಂಗ್ರೆಸ್ ಮುಖಂಡ ಟಿ.ಪ್ರಭುದೇವ್, ಕೆಎಂಎಫ್ ನಿರ್ದೇಶಕ ಸಿ.ವೀರಭದ್ರಬಾಬು, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಬಿ.ಪಿ.ಪ್ರಕಾಶ್ಮೂರ್ತಿ, ಟಿ.ರವಿಕುಮಾರ್, ಗ್ಯಾರಂಟಿ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಟಿ.ಗಿರಿಯಪ್ಪ, ಸಮರ್ಥರಾಯ, ಮೈಲಾರಪ್ಪ ಇದ್ದರು.

# ನೇಹ ಕೊಲೆ ಪ್ರಕರಣ ಸಿಬಿಐಗೆ ಕೊಡುವಂತೆ ಎಬಿವಿಪಿ ಒತ್ತಾಯ




» **ಚಿತ್ರದುರ್ಗ**

ಹುಬ್ಬಳ್ಳಿಯ ಬಿವಿಬಿ ಕಾಲೇಜಿನ ಎಂಸಿಎ ವಿದ್ಯಾರ್ಥಿನಿ ನೇಹಾ ಹಿರೇಮಠ ಲವ್ ಜಿಹಾದಿಯ ಕಾರಣಕ್ಕಾಗಿ ಪಯಾಜ್ ಎಂಬಾತ ಮಾಡಿರುವ ಭೀಕರ ಹತ್ಯೆಯನ್ನು ಖಂಡಿಸಿ, ಪ್ರತಿಭಟನೆ ನಡೆಸಿ ಪ್ರಕರಣದ ತನಿಖೆಯನ್ನು ಅಃಖ ಗೆ ಹಸ್ತಾಂತರ ಮಾಡಬೇಕೆಂದು ಎಬಿವಿಪಿ ಅಗ್ರಹಿಸುತ್ತದೆ.

ಶಾಲಾ ಕಾಲೇಜುಗಳು ಜ್ಞಾನದ ದೇಗುಲಗಳು ಇಂತಹದೇಗುಲದಲ್ಲಿ ಹಾಡು ಹಗಲೇ ವಿದ್ಯಾರ್ಥಿನಿ ನೇಹಾ ಹಿರೇಮಠಳನ್ನು ಭೀಕರ ಹತ್ಯೆಯನ್ನು ಮಾಡಿರುವಘಟನೆ ನಿಜಕ್ಕೂ ವಿದ್ಯಾರ್ಥಿ ಸಮುದಾಯದಲ್ಲಿ ಭಯದ ವಾತಾವರಣ ಮೂಡಿಸಿದಂತಾಗಿದೆ. ಕೆ.ಎಲ್.ಇತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಎಂಸಿಎ ವಿದ್ಯಾಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿನಿ ನೇಹಾ ಹಿರೇಮಠ ಅವಳನ್ನು ಜಿಹಾದಿ ಕ್ರೂರ ಮನಸ್ಥಿತಿಯ ಪಯಾಜ್ಎಂಬಾತ ಲವ್ ಜಿಹಾದಿಗಾಗಿ ಅವಳನ್ನು ಪ್ರೀತಿಸುವಂತೆ ಒತ್ತಾಯಿಸುತ್ತಿದ್ದ.


ಪುಟ 2


**ಪ್ರಮುಖ ಸುದ್ದಿ**

# ನೇಹ ಹಿರೇಮಠ್ ಕೊಲೆ: ಎಬಿವಿಪಿ ಪ್ರತಿಭಟನೆ

» **ಹೊಸದುರ್ಗ**

ಹುಬ್ಬಳ್ಳಿಯ ಬಿವಿಪಿ ಕಾಲೇಜಿನ ಎಂಸಿಎ ವಿದ್ಯಾರ್ಥಿನಿ ನೇಹ ಹಿರೇಮಠ್ ಲವ್ ಜಿಹಾದ್ರಿಯ ಕಾರಣಕ್ಕಾಗಿ ಫಯಾಜ್ ಎಂಬಾತ ಮಾಡಿರುವ ಭೀಕರ ಹತ್ಯೆಯನ್ನು ಖಂಡಿಸಿ ಹೊಸದುರ್ಗ ನಗರದಲ್ಲಿ ಪ್ರತಿಭಟನೆ ಮಾಡಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿ ಎಬಿವಿಪಿಯ ರಾಜ್ಯ ಕಾರ್ಯಕಾರಣಿ ಸದಸ್ಯರಾದ ಲಿಖಿತ ನಾಯ್ಡು ಮಾತನಾಡಿ ಶಾಲಾ ಕಾಲೇಜುಗಳು ಜ್ಞಾನದ ದೇಗುಲಗಳು ಇಂತಹ ದೇಗುಲಗಳಲ್ಲಿ ಹಾಡುವಾಗಲಿ ವಿದ್ಯಾರ್ಥಿ ನೇಹಾ ಹಿರೇಮಠಳನ್ನು ಭೀಕರ ಹತ್ಯೆ ಮಾಡಿರುವ ಘಟನೆ ನಿಜಕ್ಕೂ ವಿದ್ಯಾರ್ಥಿ ಸಮುದಾಯದಲ್ಲಿ ಭಯದ ವಾತಾವರಣ ಮೂಡಿಸಿದಂತಾಗಿದೆ. ಕಾಲೇಜಿನ ಒಳಗೆ ಬಂದು ವಿದ್ಯಾರ್ಥಿಯನ್ನು ಹತ್ಯೆ ಮಾಡಲು ಸಾಧ್ಯವಾಗಿರಬೇಕಾದರೆ ಕೊಲೆಗಾರನಿಗೆ ಕಾನೂನಿನ ಯಾವುದೇ ಭಯವು ಇಲ್ಲದೆ ರಾಜ ರೋಷವಾಗಿ ಕೃತ್ಯ ಮಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದರೆ ನಮ್ಮ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಎಷ್ಟು ಕೂಸಿದು ಹೋಗಿದೆ ಎನ್ನುವುದು ಸ್ಪಷ್ಟವಾಗಿ




ತಿಳಿಯುವಂತಾಗಿದೆ.

ಸರ್ಕಾರ ಈ ಆರೋಪಿಗೆ ಕಠಿಣ ಶಿಕ್ಷೆ ನೀಡಬೇಕು. ಕಾನೂನಿನ ಭಯ ಇಲ್ಲದಾಗ ಮಾತ್ರ ಇಂತಹ ಘಟನೆಗಳು ನಡೆಯಲು ಸಾಧ್ಯ ಕಾಲೇಜ್ ಕ್ಯಾಂಪಸ್ ಗಳು ಸುರಕ್ಷತೆಯ ಕೇಂದ್ರಗಳಾಗಿರಬೇಕು. ಮಕ್ಕಳನ್ನ ತಂದೆ–ತಾಯಿಗಳು ಕಾಲೇಜಿಗೆ ಕಳುಹಿಸಲು ಭಯಭೀತಗೊಂಡಿದ್ದಾರೆ. ಈ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಗಮನ ಹರಿಸಬೇಕು. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತನಿಖೆಯನ್ನು ಸಿಬಿಐಗೆ ಹಸ್ತಾಂತರ ಮಾಡಬೇಕು ಎಂದರು.

ಪ್ರತಿಭಟನೆಯಲ್ಲಿ ಎಬಿವಿಪಿಯ ಜಿಲ್ಲಾ ಸಂಚಾಲಕರಾದ ಸಿದ್ದೇಶ್ ಯಾದವ್ ಹಾಗೂ ನಗರ ಕಾರ್ಯದರ್ಶಿಯಾದ ಅಕ್ಷಯ್ ಬಿ, ಹೋರಾಟ ಪ್ರಮುಖರಾದ ಸುಮಂತ ಆಚಾರ್, ನಗರ ಸೋಶಿಯಲ್ ಮೀಡಿಯಾ ಪ್ರಮುಖ ಸಂದೀಪ್ ವಿ, ತಾಲೂಕ್ ಸಂಚಾರ ವಿವೇಕ್ ಆಚಾರ್, ಹಾಗೂ ಕಾರ್ಯಕರ್ತರಾದ ವಿಶಾಲ್ ವಿ, ಗುರುದತ್, ಸುನಿಲ್, ಶಿವಕುಮಾರ್, ವಿನಯ್, ಸಿಂಚನ, ವಂದನ, ದೇವರಾಜ್, ಪ್ರಿಯಾಂಕ, ರಂಜನಾ ಹಾಗೂ ವಿದ್ಯಾರ್ಥಿ ಪರಿಷತ್ತಿನ ಹಿರಿಯ ಕಾರ್ಯಕರ್ತರು ಹಾಗು ಸಾರ್ವಜನಿಕರು ಭಾಗವಹಿಸಿದ್ದರು.

> “ನೇಹಾ ಹಿರೇಮಠ್ ಹತ್ಯೆ ಅತ್ಯಂತ ಖಂಡನೀಯ, ಈ ಘಟನೆಯಿಂದ ರಾಜ್ಯದ ವಿದ್ಯಾರ್ಥಿ ಸಮುದಾಯ ಭಯಭೀತಿಗೊಂಡಿದೆ ಪೊಲೀಸರು ಕೂಡಲೇ ಸೂಕ್ತ ತನಿಖೆಯನ್ನು ಕೈಗೊಂಡು ಅಪರಾಧಿಗೆ ಉಗ್ರ ಶಿಕ್ಷೆ ಆಗುವ ಹಾಗೆ ಮಾಡಿ ವಿದ್ಯಾರ್ಥಿನಿಯ ಕುಟುಂಬಕ್ಕೆ ನ್ಯಾಯ ಒದಗಿಸಬೇಕಾಗಿದೆ. ರಾಜ್ಯ ಸರ್ಕಾರ ದಿನದಿಂದ ದಿನಕ್ಕೆ ಹದಗೆಡುತ್ತಿರುವ ಕಾನೂನು ವ್ಯವಸ್ಥೆಯ ಬಗ್ಗೆ ಗಂಭೀರವಾಗಿ ಚಿಂತನೆ ನಡೆಸಿ ಕಾರ್ಯ ಪ್ರವೃತ್ತರಾಗಿರಬೇಕು ಹಾಗೂ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು.
>
> » **ಲೇಖನಾ, ನಗರ ಎಬಿವಿಪಿ ವಿದ್ಯಾರ್ಥಿ ಪ್ರಮುಖ್**

## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಇಂದು ವಿದ್ಯುತ್ ವ್ಯತ್ಯಯ

» **ಚಿತ್ರದುರ್ಗ**



ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿ ಬರುವ ಪಂಡರಹಳ್ಳಿ ಲೈನ್‌ನ ಟ್ಯಾಪಿಂಗ್ ಪಾಯಿಂಟ್‌ನಿಂದ ಪಂಡರಹಳ್ಳಿ 66/11 ಕೆವಿ ವಿ.ವಿ ಕೇಂದ್ರದವರೆಗೆ ಡ್ರೇಕ್ ಕಂಡಕ್ಟರ್ ಬಳಸಿ ಉದ್ದೇಶಿತ 66 ಕೆವಿ ಲೈನ್ ಮತ್ತು ಕೊಯೋಟ್ ಕಂಡಕ್ಟರ್ ಬಳಸಿ ಹಾಲಿ ಇರುವ 66 ಕೆವಿ ಡಿ.ಸಿ ಲೈನ್‌ನಿಂದ ಮಲ್ಟಿ ಸರ್ಕ್ಯೂಟ್ ಟವರ್ ನಿರ್ಮಾಣ ಮಾಡಲು 66/11ಕೆವಿ ಪಂಡರಹಳ್ಳಿ ಕೇಂದ್ರದಿಂದ ಹೊರಹೊಮ್ಮುವ 11ಕೆವಿ ಮಾರ್ಗ ಮುಕ್ತತೆ ನೀಡಬೇಕಾಗಿರುವುದರಿಂದ ಇದೇ ಏಪ್ರಿಲ್ 22 ರಂದು ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಮಾರ್ಗಗಳು: ಅನ್ನೇಹಾಳು, ಹುಲ್ಲೂರು, ಪಂಡರಹಳ್ಳಿ, ಜಾನುಕೊಂಡ, ಸಿದ್ದಾಪುರ, ಗೊಡಬನಾಳ್, ಸೊಂಡೆಕೊಳ, ಸಿಂಗಾಪುರ, ಕಕ್ಕೇಹರವು ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ಅಡಚಣೆಯಾಗಲಿದೆ. ಗ್ರಾಹಕರು ಸಹಕರಿಸಬೇಕುಎಂದುಬೆಸ್ಕಾಂಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮದ್ಯ ಮಾರಾಟ ನಿಷೇಧ

» **ಚಿತ್ರದುರ್ಗ**

ಚಿತ್ರದುರ್ಗ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಏಪ್ರಿಲ್ 26ರಂದು ಮತದಾನ ನಡೆಯಲಿದೆ. ಮತದಾನ ದಿನ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಏಪ್ರಿಲ್ 24ರ ಸಂಜೆ 6 ಗಂಟೆಯಿಂದ ಏಪ್ರಿಲ್ 26 ಮಧ್ಯರಾತ್ರಿ 12 ಗಂಟೆಯವರೆಗೆ ಜಿಲ್ಲೆಯಾದ್ಯಂತ ಮದ್ಯ ಮಾರಾಟ ಮಾಡುವುದನ್ನು ನಿಷೇಧಿಸಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ. ಎಲ್ಲಾ ಮದ್ಯದ ಅಂಗಡಿಗಳನ್ನು ಮುಚ್ಚುಬೇಕು. ಯಾವುದೇ ತರಹದ ಬಾರ್ ಅಂಡ್ ರೆಸ್ಟೋರೆಂಟ್, ಕ್ಲಬ್ ಮತ್ತು ಹೋಟೆಲ್, ಡಾಬಾ ಗಳಲ್ಲಿ ಮದ್ಯ ಸಾಗಾಣಿಕೆ, ಶೇಖರಣೆ ಮತ್ತು ಮದ್ಯ ಮಾರಾಟ ಮಾಡುವಂತಿಲ್ಲ. ಆದೇಶ ಉಲ್ಲಂಘಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಸಿದ್ದಾರೆ.

### ತರಬೇತಿ, ಜಾಗೃತಿಗಾಗಿ ನೀಡಲಾದ ಇವಿಎಂ ತಪಾಸಣೆ

» **ಚಿತ್ರದುರ್ಗ**

ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ತರಬೇತಿ ಹಾಗೂ ಜಾಗೃತಿಗಾಗಿ ನೀಡಲಾದ ಇವಿಎಂ ಹಾಗೂ ವಿವಿಪ್ಯಾಟ್ ಗಳ ಮೊದಲ ಹಂತದ ತಪಾಸಣೆ ಕಾರ್ಯ ಶನಿವಾರ ನಡೆಸಲಾಯಿತು. ಚಿತ್ರದುರ್ಗ ನಗರದ ಎನ್ಎಚ್–4 ರಸ್ತೆಯ ಕುಂಚಿಗನಾಳ ಸಮೀಪದ ಆಂಜನೇಯ ದೇವಸ್ಥಾನದ ಹಿಂಭಾಗದಲ್ಲಿರುವ ಇವಿಎಂ, ವಿವಿಪ್ಯಾಟ್ ಉಗ್ರಾಣದಲ್ಲಿ ಲೋಕಸಭಾ ಚುನಾವಣೆ ಸಂಬಂಧ ತರಬೇತಿ ಹಾಗೂ ಜಾಗೃತಿಗಾಗಿ ನೀಡಲಾದ ಇವಿಎಂ, ವಿವಿ ಪ್ಯಾಟ್‌ಗಳನ್ನು ಇಂಜಿನಿಯರ್‌ಗಳ ತಂಡ ತಪಾಸಣೆ ನಡೆಸಿತು. ಲೋಕಸಭಾ ಚುನಾವಣೆ ಸಂಬಂಧ ತರಬೇತಿ ಹಾಗೂ ಜಾಗೃತಿಗಾಗಿ ಜಿಲ್ಲೆಯಾದ್ಯಂತ 60 ಬ್ಯಾಲೆಟ್ ಯೂನಿಟ್, 72 ಕಂಟ್ರೋಲ್ ಯೂನಿಟ್ ಹಾಗೂ ವಿವಿ ಪ್ಯಾಟ್‌ಗಳನ್ನು ಬಳಸಿಕೊಳ್ಳಲಾಗಿದ್ದು, ಈ ಹಿನ್ನೆಲೆಯಲ್ಲಿ ತರಬೇತಿ ಹಾಗೂ ಜಾಗೃತಿಗಾಗಿ ನೀಡಿರುವ ಇವಿಎಂ, ವಿವಿ ಪ್ಯಾಟ್‌ಗಳ ಮೊದಲ ಹಂತದ ತಪಾಸಣೆ ನಡೆಸಲಾಯಿತು.ಈ ಸಂದರ್ಭದಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೇರಿದಂತೆ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಇದ್ದರು.





## ಫಾಸ್ಟ್ ನ್ಯೂಸ್

### ಮದ್ಯ ಸಾಗಾಟ: ಪ್ರಕರಣ ದಾಖಲು



» ಚಳ್ಳಕೆರೆ

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಅಕ್ರಮ ಮದ್ಯ ಮಾರಾಟಕ್ಕೆ ಸಂಪೂರ್ಣ ಕಡಿವಾಣ ಹಾಕಲು ಅಬಕಾರಿ ಇಲಾಖೆ ದೃಢನಿರ್ಧಾರ ಕೈಗೊಂಡು ನಿರಂತರ ಕಾರ್ಯಚರಣೆ ನಡೆಸುತ್ತಿದೆ. ತಾಲ್ಲೂಕಿನ ತಳಕು ಹೋಬಳಿಯ ಬೋಗನಹಳ್ಳಿ ಗ್ರಾಮದ ಎಚ್.ನಾಗೇಶ ಎಂಬ ವ್ಯಕ್ತಿ ತನ್ನ ಬೈಕ್‌ನಲ್ಲಿ ಸುಮಾರು 7920 ಲೀಟರ್ 3520ರೂ ಮೌಲ್ಯ ಮದ್ಯ ಹಾಗೂ 50 ಸಾವಿರ ಮೌಲ್ಯದ ಬೈಕನ್ನು ವಶಪಡಿಸಿಕೊಂಡು ಆತನ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ. ಜಿಲ್ಲಾ ಅಬಕಾರಿ ಉಪ ಆಯುಕ್ತ ಮಾರ್ಗದರ್ಶನದಲ್ಲಿ ಅಬಕಾರಿ ಉಪಾಧೀಕ್ಷಕರು ಹಿರಿಯೂರು ಉಪವಿಭಾಗ, ಚಳ್ಳಕೆರೆ ಅಬಕಾರಿ ನಿರೀಕ್ಷಕರಾದ ಸಿ.ನಾಗರಾಜು, ಎಸ್.ಎಚ್.ರೇಖಾ, ಡಿ.ಟಿ.ತಿಪ್ಪಯ್ಯ, ಸಿಬ್ಬಂದಿಯಾದ ಸೋಮಶೇಖರ, ನಾಗರಾಜು, ಮಂಜುಳಾ ಮುಂತಾದವರು ದಾಳಿಯಲ್ಲಿ ಭಾಗವಹಿಸಿದ್ದರು.

### 23 ರಂದು ವೀರಭದ್ರ ದೇವರ ಗುಗ್ಗುಳ

» ಚಿತ್ರದುರ್ಗ

ನಗರದ ನೀಲಕಂಠೇಶ್ವರ ದೇವಾಲಯದ ಆವರಣದಲ್ಲಿನ ವೀರಶೈವ ಸಮಾಜದವತಿಯಿಂದ ಏ. 23 ರ ಮಂಗಳವಾರ ಹರಪನಹಳ್ಳಿ ವತಿಯಿಂದ ಪಟ್ಟಣದ ಮೇಗಳಪೇಟೆ ಗುಗ್ಗಳ ವೀರಭದ್ರೇಶ್ವರ ದೇವಸ್ಥಾನ ಸಮಿತಿ ಇವರಿಂದ ಜನಪದ ಕಲಾ ತಂಡದೊಂದಿಗೆ ಶ್ರೀ ವೀರಭದ್ರ ದೇವರ ಗುಗ್ಗುಳ ಮತ್ತು ಅಗ್ನಿಕುಂಡ ಕಾರ್ಯಕ್ರಮ ನಡೆಯಲಿದೆ ಎಂದು ಸಮಾಜದ ಪ್ರಕಟಣೆ ತಿಳಿಸಿದೆ. ಅಂದು ಬೆಳಿಗ್ಗೆ 7 ಗಂಟೆಗೆ ಗಂಗಾಪೂಜೆಯ ನಂತರ ನಗರದ ರಂಗಯ್ಯನ ಬಾಗಿಲ ಬಳಿಯ ಉಜ್ಜಯನಿ ಮಠದಿಂದ ಜನಪದ ಕಲಾ ತಂಡದೊಂದಿಗೆ ಗುಗ್ಗುಳ ಪ್ರಾರಂಭವಾಗಲಿದ್ದು, ರಂಗಯ್ಯನ ಬಾಗಿಲು, ದೊಡ್ಡಪೇಟೆ, ಚಿಕ್ಕಪೇಟೆ, ಆನೆಬಾಗಿಲು, ಮಹಾತ್ಮಗಾಂಧಿ ವೃತ್ತ ಮುಖಾಂತರವಾಗಿ ಶ್ರೀ ನೀಲಕಂಠೇಶ್ವರ ದೇವಾಲಯದ ಮುಂಭಾಗದಲ್ಲಿ ನಿರ್ಮಾಣ ಮಾಡಿರುವ ಅಗ್ನಿಕುಂಡವನ್ನು ಹಾಯುವುದರ ಮೂಲಕ ತಲುಪಲಿದೆ. ತದ ನಂತರ ಮಹಾ ಮಂಗಳಾರತಿ ದಾಸೋಹದ ವ್ಯವಸ್ಥೆಯನ್ನು ಮಾಡಲಾಗಿದೆ. ಶ್ರೀ ವೀರಭದ್ರಸ್ವಾಮಿ ಮನ ದೇವರ ಮನೆತನದವರು ಹಾಗೂ ಭಕ್ತಾಧಿಗಳು ಈ ಗುಗ್ಗುಳದಲ್ಲಿ ಭಾಗವಹಿಸಬೇಕು, ಗುಗ್ಗುಳ ಬರುವ ದಾರಿಯಲ್ಲಿ ಭಕ್ತಾಧಿಗಳು ಮನೆಯ ಮುಂದೆ ನೀರನ್ನು ಹಾಗೂ ರಂಗೋಲೆಯನ್ನು ಹಾಕುವುದರ ಮೂಲಕ ಸ್ವಾಮಿಯ ಗುಗ್ಗುಳವನ್ನು ಬರ ಮಾಡಿಕೊಳ್ಳುವಂತೆ ಮನವಿ ಮಾಡಿದ್ದಾರೆ.

### 22 ರಂದು ಹರಪನಹಳ್ಳಿಯಲ್ಲಿ ಪ್ರಚಾರ

» ದಾವಣಗೆರೆ

ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶ್ರೀಮತಿ ಗಾಯಿತ್ರಿ ಸಿದ್ದೇಶ್ವರ್ ಅವರು ಏಪ್ರಿಲ್ 22 ರಂದು ಹರಪನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಾಜಿ ಸಚಿವ ಜಿ.ಕರುಣಾಕರರೆಡ್ಡಿ ಅಧ್ಯಕ್ಷತೆಯಲ್ಲಿ ಪ್ರಚಾರ ನಡೆಸಲಿದ್ದಾರೆ. ಹರಪನಹಳ್ಳಿ ತಾಲೂಕಿನಲ್ಲಿ ಬೆಳಗ್ಗೆ 10 ಕ್ಕೆ ಬಾಗಳಿ, 10.45 ಕ್ಕೆ ನಂದಿಬೇವೂರು, 11.30 ಕ್ಕೆ ಮೈದೂರು, 12.15 ಕ್ಕೆ ಚಿಗಟೇರಿ, ಮಧ್ಯಾಹ್ನ 1 ಗಂಟೆಗೆ ಬೆಣ್ಣೆಹಳ್ಳಿ, 1.45 ಕ್ಕೆ ಮತ್ತಿಹಳ್ಳಿ, 3.30 ಕ್ಕೆ ಸಾಸ್ವಿಹಳ್ಳಿ, 4.15 ಕ್ಕೆ ಕಡಬಗೇರಿ, 5 ಕ್ಕೆನಿಚ್ಚವ್ವನಹಳ್ಳಿ, 5.45 ಕ್ಕೆ ಅಡವಿಹಳ್ಳಿ ಗ್ರಾಮಗಳಲ್ಲಿ ಮತಯಾಚಿಸಲಿದ್ದು, ಮಂಡಲ ಅಧ್ಯಕ್ಷರು, ಪದಾಧಿಕಾರಿಗಳು, ಬೂತ್ ಅಧ್ಯಕ್ಷರು, ಪದಾಧಿಕಾರಿಗಳು, ಗ್ರಾಮದ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಿದ್ದಾರೆ.

### ಅನಧಿಕೃತ ಕೋಚಿಂಗ್ ಸೆಂಟರ್‌ಗಳ ಮೇಲೆ ಕಾನೂನು ಕ್ರಮ

» ದಾವಣಗೆರೆ

ಜಿಲ್ಲಾ ವ್ಯಾಪ್ತಿಯಲ್ಲಿ ಹಲವಾರು ಸಂಸ್ಥೆಗಳು ಜೆಇಇ, ನೀಟ್, ಸಿಇಟಿ, ಇತರೆ ಅಕಾಡೆಮಿ, ಟ್ಯೂಟೋರಿಯಲ್ ಸಂಸ್ಥೆಗಳನ್ನು ಅನಧಿಕೃತವಾಗಿ ನಡೆಸುತ್ತಿರುವುದು ಇಲಾಖೆ ಗಮನಕ್ಕೆ ಬಂದಿದ್ದು ಅಂತಹ ಸಂಸ್ಥೆಗಳ ಮೇಲೆ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಶಾಲಾ ಶಿಕ್ಷಣ ಪದವಿ ಪೂರ್ವ ಇಲಾಖೆ ಉಪನಿರ್ದೇಶಕರಾದ ಕರಿಸಿದ್ದಪ್ಪ ಎಚ್ಚರಿಕೆ ನೀಡಿದ್ದಾರೆ. ಶಿಕ್ಷಣ ಇಲಾಖೆಯ ಅನುಮತಿ ಪಡೆಯದೇ ಇಂತಹ ಕೋಚಿಂಗ್ ಸೆಂಟರ್‌ಗಳನ್ನು ಪ್ರಾರಂಭಿಸುವ ಮೂಲಕ ಅನಧಿಕೃತವಾಗಿ ಜಾಹಿರಾತು ನೀಡಿ ಸಾರ್ವಜನಿಕರಿಂದ ಮನಸು ಇಚ್ಛೆ ಹಣವನ್ನು ವಸೂಲಿ ಮಾಡುವುದು ಕಂಡು ಬಂದಿರುತ್ತದೆ. ಮತ್ತು ಕಾನೂನುಬಾಹಿರವಾಗಿ ವಿದ್ಯಾರ್ಥಿಗಳಿಗೆ ಪಾಠಗಳನ್ನು ಮಾಡುತ್ತಿರುವುದನ್ನು ಗಮನಿಸಲಾಗಿದೆ. ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ಅನುಚ್ಛೇದ 35 ರ ಪ್ರಕಾರ ಮತ್ತು ಕರ್ನಾಟಕ ಟ್ಯೂಟೋರಿಯ ಇನ್ಸಿಟ್ಯೂಷನ್ಸ್ ನೊಂದಣಿ ಮತ್ತು ನಿಯಂತ್ರಣ ನಿಯಮಗಳು 2001 ರ ಪ್ರಕಾರ ಎಲ್ಲಾ ಕೋಚಿಂಗ್ ಸೆಂಟರ್‌ಗಳು ಕಡ್ಡಾಯವಾಗಿ ನೊಂದಣಿಯಾಗಬೇಕಾಗಿರುತ್ತದೆ.

## ಜಯಂತಿ ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅಭಿಮತ

# ಜೀವನ ಮೌಲ್ಯ ಬೋಧಿಸಿದ ಮಹಾವೀರ

» ಚಿತ್ರದುರ್ಗ

ಸತ್ಯ, ಅಹಿಂಸೆ, ಬ್ರಹ್ಮಚರ್ಯ, ಆಸ್ತೇಯ, ಅಪರಿಗ್ರಹ ಎನ್ನುವ ಐದು ಸರಳ ಪದಗಳಲ್ಲಿ ಜೀವನ ಮೌಲ್ಯಗಳನ್ನು ಭಗವಾನ್ ಮಹಾವೀರ ಬೋಧಿಸಿದ್ದಾರೆ ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಹೇಳಿದರು.

ನಗರದ ತ.ರಾ.ಸು ರಂಗಮಂದಿರದಲ್ಲಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಭಗವಾನ್ ಮಹಾವೀರ ಸರಳ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಮಹಾವೀರರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಸತ್ಯ ಹೇಳುವುದು, ಪರರನ್ನು ಹಾಗೂ ಸಕಲ ಜೀವಗಳ ಎಡೆಗೆ ಅಹಿಂಸಾ ಭಾವದಿಂದ ನಡೆದುಕೊಳ್ಳುವುದು. ಶುದ್ಧ ಚಾರಿತ್ರ್ಯ ಕಾಪಾಡಿಕೊಳ್ಳುವುದು. ಪರ ವಸ್ತುಗಳನ್ನು ಕದಿಯದಿರುವುದು. ಎಲ್ಲಾ ಭವ ಬಂಧನಗಳಿಂದ ಮುಕ್ತವಾಗಿರಬೇಕು ಎಂಬುದು ಮಹಾವೀರ ಬೋಧನೆ ತಿರುಳಾಗಿದೆ. ಮಹಾವೀರರ ಈ ಬೋಧನೆಗಳು ಸರಳ ಪದಗಳಲ್ಲಿ ಇವೆ. ಇವುಗಳನ್ನು ಅರ್ಥೈಸಿಕೊಂಡು



ಜೀವನದಲ್ಲಿ ಅಳವಡಿಸಿಕೊಂಡರೆ ಉತ್ತಮ ಸಮಾಜ ನಿರ್ಮಾಣವಾಗಲಿದೆ. ಇದರಿಂದ ಹಿಂಸೆ, ಯುದ್ಧಗಳು ಭೀತಿಯಿಲ್ಲದೆ ಎಲ್ಲರು ಪ್ರಗತಿ ಕಾಣಬಹುದು ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅಭಿಪ್ರಾಯಪಟ್ಟರು.

ಜೈನ ಸಮಾಜದ ಮುಖಂಡ ವಸ್ತಿಮಲ್ ಮಾತನಾಡಿ, ಮಹಾವೀರ ಸರಳ ಬೋಧನೆ ಎಂದರೆ 'ಜಿಯೋ ಜೀನೇದೋ' ಇದರ ಅರ್ಥ ನೀವು ಬದುಕಿ ಇತರರಿಗೆ ಬದುಕಲು ಬಿಡಿ ಎಂಬುದಾಗಿದೆ. ಕಾಮ, ಕ್ರೋಧ, ಮೋಹ, ಮದ, ಮಾತ್ಸರ್ಯಗಳನ್ನು ಜಯಿಸಿದರೆ ಮುಕ್ತಿ ಪಡೆಯಬಹುದಾಗಿದೆ. ರಾಜ ಮನೆತನದಲ್ಲಿ ಹುಟ್ಟಿದರೂ ವೈಭೋಗ ತೊರೆದು ಸನ್ಯಾಸತ್ವನ್ನು ಮಹಾವೀರರು ಪಡೆದುಕೊಂಡರು. ಇದೇ ಹಾದಿಯಲ್ಲಿ ಇಂದಿಗೂ ಹಲವಾರು ಕೋಟ್ಯಾಧಿಪತಿಗಳು ತಮ್ಮ ಎಲ್ಲಾ ಆಸ್ತಿ ಪಾಸ್ತಿಗಳನ್ನ ದಾನ ಮಾಡಿ ಸನ್ಯಾಸ ದೀಕ್ಷೆ ಪಡೆಯುವುದನ್ನು ನೋಡಬಹುದು ಎಂದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಮಾದರಿ ನೀತಿ ಸಂಹಿತೆ ಹಿನ್ನಲೆಯಲ್ಲಿ ಸರಳವಾಗಿ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿತ್ತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಕುಮಾರ್ ಪ್ರಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ರಂಗನಿರ್ದೇಶಕ ಕೆ.ಪಿ.ಎಂ.ಗಣೇಶಯ್ಯ ನಾಡಗೀತೆ ಪ್ರಸ್ತುತ ಪಡಿಸುವುದರೊಂದಿಗೆ ಕಾರ್ಯಕ್ರಮ ನಿರೂಪಿಸಿದರು.

ತಹಶೀಲ್ದಾರ್ ಡಾ.ನಾಗವೇಣಿ, ಜೈನ ಸಮುದಾಯದ ಮುಖಂಡರಾದ ಪ್ರೇಮ್‌ಚಂದ್,ಮನ್ನಿರಾಜ್ ಇದ್ದರು.

# ನಮ್ಮ ಬೆಂಬಲ ಬಿಜೆಪಿಗೆ: ಜಯಸಿಂಹ

» ಚಿತ್ರದುರ್ಗ

ನಮ್ಮ ಬೆಂಬಲ ಬಿಜೆಪಿಗೆ ಏಕೆಂದರೆ ನಮ್ಮ ದೇಶದ ದೃಷ್ಟಿಯಿಂದ ಒಳ್ಳೆಯ ಆಡಳಿತ ಸಮರ್ಪಕವಾಗಿ ನಿಭಾಯಿಸುವ ಪ್ರಧಾನಿ ಬೇಕು ಆದ್ದರಿಂದ ನಮ್ಮ ಹೊಳಲ್ಕೆರೆ ಕ್ಷೇತ್ರದಲ್ಲಿ ನನ್ನ ಹಿತೈಷಿಗಳು. ಸ್ನೇಹಿತರು, ನನಗೆ ಚುನಾವಣೆಯಲ್ಲಿ ಸಾಕಾರ ಕೊಟ್ಟಂತ ಮತ ಬಾಂಧವರು, ಸಭೆಗಳನ್ನು ನಡೆಸಿ ಬೆಂಬಲ ನಾವು ಯಾರಿಗೆ ಕೊಡಬೇಕೆಂದು ಯೋಚಿಸಿ, ನಿರ್ಧಾರ ತೆಗೆದುಕೊಂಡೆವು, ಮೋದಿಜಿ ಅವರು ನಮ್ಮ ದೇಶಕ್ಕಾಗಿ ಅಪಾರ ಅತ್ಯುತ್ತಮ ಕಾರ್ಯಗಳನ್ನು ಮಾಡಿದ್ದಾರೆ ಎಂದು ಡಾಕ್ಟರ್ ಜಯಸಿಂಹ ತಿಳಿಸಿದ್ದಾರೆ. ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತ 2019 ರಲ್ಲಿ ನಮ್ಮ ದೇಶ ಬಡತನದಲ್ಲಿತ್ತು, ಕೆಲವು ದೇಶಗಳು ನಮ್ಮ ರಾಷ್ಟ್ರವನ್ನು ಹೀನಾಯವಾಗಿ ಕಾಣುತ್ತಿದ್ದರು, ಆದರೆ ಈ ದಿನ ಜಗತ್ತಿನ ಅತ್ಯಂತ ಭಾರತದ ಬಗ್ಗೆ ತಲೆಯೆತ್ತಿ ನೋಡುವಂತಹ ಅವಕಾಶ ತಂದೊಡ್ಡಿದ್ದಾರೆ, ಆರ್ಥಿಕವಾಗಿರಬಹುದು, ವೈಜ್ಞಾನಿಕವಾಗಿ ರಬಹುದು ಸಾಕಷ್ಟು ಕೊಡುಗೆ ದೇಶಕ್ಕೆ ಪ್ರಧಾನಿಯಾಗಿ ತಂದುಕೊಟ್ಟಿದ್ದಾರೆ, ಇಂಥ ಒಬ್ಬ ದಕ್ಷ ಪ್ರಧಾನಿಯನ್ನು ಪುನರ್ ಆಯ್ಕೆ ಮಾಡಲು ಎಲ್ಲರೂ ಬಯಸಿದ್ದೇವೆ, 2024ರ ಚಿತ್ರದುರ್ಗ ಲೋಕಸಭಾ ಚುನಾವಣೆಯಲ್ಲಿ



ಬಿಜೆಪಿ ಅಭ್ಯರ್ಥಿಯಾದ ಗೋವಿಂದ ಕಾರಜೋಳಅವರನ್ನುಗೆಲ್ಲಿಸಿ,ಲೋಕಸಭಾಕ್ಷೇತ್ರದ ಎಲ್ಲಾ ಮತ ಬಾಂಧವರು ಅಭಿವೃದ್ಧಿಗೊಳಿಸಲು ಇವರನ್ನ ಆಯ್ಕೆ ಮಾಡಿ ಎಂದು ಮತ ಬಾಂಧವರಲ್ಲಿ ಮನವಿ ಮಾಡಿದ್ದಾರೆ.

ನಾನು ಕಳೆದ ಬಾರಿ ಅಂದರೆ ವಿಧಾನಸಭಾ ಚುನಾವಣೆಯಲ್ಲಿ ಹೊಳಲ್ಕೆರೆ ಕ್ಷೇತ್ರದಿಂದ ಪಕ್ಷೇತರ ಅಭ್ಯರ್ಥಿಯಾಗಿ 20000 ಮತಗಳನ್ನು ಪಡೆದಿದ್ದೇನೆ, ನನ್ನ ಬೆಂಬಲಕ್ಕೆ ಸಾಕಷ್ಟು ಸಂಘ-ಸಂಸ್ಥೆಗಳು, ಸಂಘಟನೆಗಳು, ಸಮಾಜಗಳು, ನನಗೆ ಸಹಕಾರ ಕೊಟ್ಟಿದ್ದವು, ನಮ್ಮ ಹೊಳಲ್ಕೆರೆ ಕ್ಷೇತ್ರದಲ್ಲಿ ಬಹು ಸಂಖ್ಯೆಯಲ್ಲಿ ಉತ್ತಮ ವಿದ್ಯಾಭ್ಯಾಸ ಮುಗಿಸಿಕೊಂಡಿದ್ದಾರೆ, ಅದರಲ್ಲಿ 40 ರಿಂದ 50 ಜನ ವೈದ್ಯರಿದ್ದಾರೆ, ಇಂಜಿನಿಯರ್ ಗಳಿದ್ದಾರೆ, ಅನೇಕರು ಉತ್ತಮ ಸರ್ಕಾರಿ ವೃತ್ತಿಯಲ್ಲಿದ್ದಾರೆ, ಅದರಂತೆ ನಮ್ಮ ತಂದೆಯವರು ಕೂಡ ಚಿತ್ರದುರ್ಗ ಜಿಲ್ಲೆಯಲ್ಲಿ ವೈದ್ಯರಾಗಿ ಸರ್ಕಾರಿ ಸೇವೆಯನ್ನು ಮಾಡಿ ಈಗ ನಿವೃತ್ತಿ ಹೊಂದಿ, ಅವರಿಗೆ 70 ವರ್ಷ ವಯಸ್ಸಾಗಿದ್ದರು ಕೂಡ ಜನಸೇವೆಯಲ್ಲಿದ್ದಾರೆ, ನಾನು ಕೂಡ 25 ವರ್ಷ ಸರ್ಕಾರಿ ಹುದ್ದೆಯಲ್ಲಿದ್ದು ವೈದ್ಯರಾಗಿ ಹತ್ತು ವರ್ಷ ಹೊಳಲ್ಕೆರೆ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ್ದೇನೆ, ಕ್ಷೇತ್ರದ ಜನತೆ ನಾನು ಮಾಡುತ್ತಿದ್ದ ಜನರ ಸೇವೆಯನ್ನು ಗುರುತಿಸಿ ಸರ್ಕಾರಿ ವೃತ್ತಿಗೆ ರಾಜೀನಾಮೆ ಕೊಡಿಸಿ ಬಿಜೆಪಿ ಪಕ್ಷದಿಂದ ಅಭ್ಯರ್ಥಿಯಾಗಬೇಕೆಂದು ಒತ್ತಡದಿಂದ ನನ್ನನ್ನು ಬೆಂಬಲಿಸಿದರು, ಪಕ್ಷದಲ್ಲಿ ನನಗೆ ಟಿಕೆಟ್ ಸಿಗದೇ ಇಲ್ಲದಿರುವುದರಿಂದ ಜನರ ಒತ್ತಾಯದ ಮೇರೆಗೆ ಪಕ್ಷೇತರ ಅಭ್ಯರ್ಥಿಯಾಗಿ ನಿಂತಿದ್ದಾಗ ಜನತೆ ನನ್ನನ್ನು ಕೈ ಬಿಡಲಿಲ್ಲ, ಮೂರನೇ ಸ್ಥಾನಕ್ಕೆ ನನ್ನನ್ನು ತಂದರು ಎಂದರು.

ಈ ಸಂದರ್ಭದಲ್ಲಿ ಹೊಳಲ್ಕೆರೆ ಕ್ಷೇತ್ರದ ವೀರಶೈವ ಮುಖಂಡ ಎಚ್ ಎಮ್ ಸಿದ್ದಪ್ಪ ಅಳದಾರ, ಬಂಜಾರ ಸಮಾಜದ ಮುಖಂಡ ವೀರೇಶ್,ಗಿರೀಶ್ ಎಸ್‌ಟಿ ಸಮಾಜದ ಮುಖಂಡ ಕರಿಯಪ್ಪ, ಇನ್ನಿತರರು ಭಾಗವಹಿಸಿದ್ದರು




ಮೊಳಕಾಲ್ಮೂರು ತಾಲ್ಲೂಕಿನ ಬಿಜೆಪಿ.ಯ 25 ಕ್ಕೂ ಹೆಚ್ಚು ಮಂದಿ ಕಾಂಗ್ರೆಸ್ ಸೇರ್ಪಡೆ.

# ನೇಹ ಕೊಲೆ ಪ್ರಕರಣ ಸಿಬಿಐಗೆ ಕೊಡುವಂತೆ ಎಬಿವಿಪಿ ಒತ್ತಾಯ



» ಮೊದಲ ಪುಟದಿಂದ

ಈ ಪ್ರೀತಿಯನ್ನು ವಿದ್ಯಾರ್ಥಿನಿ ನಿರಾಕರಿಸಿದಕ್ಕಾಗಿ ಆಕೆಯ ಕಾಲೇಜಿಗೆ ಆಕ್ರಮವಾಗಿ ಪ್ರವೇಶಿಸಿ ಚಾಕುವಿನಿಂದ 9 ಬಾರಿಇರಿದು ಬರ್ಬರವಾಗಿ ಹತ್ಯೆಮಾಡಲಾಗಿದೆ.

ಕಾಲೇಜಿನ ಒಳಗೆ ಬಂದು ವಿದ್ಯಾರ್ಥಿನಿಯನ್ನು ಹತ್ಯೆ ಮಾಡಲು ಸಾಧ್ಯವಾಗಿರಬೇಕಾದರೆ ಕೊಲೆಗಾರನಿಗೆ ಕಾನೂನಿನ ಯಾವುದೇ ಭಯವೂಇಲ್ಲದೆರಾಜಾರೋಷವಾಗಿ ಕೃತ್ಯ ಮಾಡುವ ಸ್ಥಿತಿ ನಿರ್ಮಾಣವಾಗಿದೆಎಂದರೆ ನಮ್ಮರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಎಷ್ಟು ಕುಸಿದು ಹೋಗಿದೆಎನ್ನುವುದು ಸ್ಪಷ್ಟವಾಗಿ ತಿಳಿಯುವಂತಾಗಿದೆ. ಈ ಘಟನೆಯಿಂದ ರಾಜ್ಯದ ವಿದ್ಯಾರ್ಥಿ ಸಮುದಾಯ ಭಯಭೀತ ಗೊಂಡಿದೆ. ಪೊಲೀಸರುಕೂಡಲೇ ಸೂಕ್ತ ತನಿಖೆಯನ್ನುಕೈಗೊಂಡು, ಅಪರಾಧಿಗೆಉಗ್ರ ಶಿಕ್ಷೆ ಆಗುವ ಹಾಗೆ ಮಾಡಿ ವಿದ್ಯಾರ್ಥಿನಿಯಕುಂಟುಂಬಕ್ಕೆ ನ್ಯಾಯ ಒದಗಿಸಬೇಕಾಗಿದೆ. ಜತೆಗೆರಾಜ್ಯಾದ್ಯಂತ ಪೊಲೀಸರು ಶಾಲಾ ಕಾಲೇಜುಗಳ ಬಳಿ ಮಪ್ತಿಯಲ್ಲಿಕಾರ್ಯನಿರ್ವಹಿಸಿ ಸಂಭಾವ್ಯ ಘಟನೆಗಳನ್ನು ತಡೆಯಲು ಪ್ರಯತ್ನಿಸಬೇಕು ಎಂದು ಆಗ್ರಹಿಸಲಾಯಿತು.ರಾಜ್ಯ ಸರ್ಕಾರ ದಿನದಿಂದ ದಿನಕ್ಕೆ ಹದಗೆಡುತ್ತಿರುವ ಕಾನೂನು ಸುವ್ಯವಸ್ಥೆಯ ಬಗ್ಗೆ ಗಂಭೀರವಾಗಿಚಿಂತನೆ ನಡೆಸಿ ಕಾರ್ಯ ಪ್ರವೃತ್ತರಾಗಬೇಕು. ಸರ್ಕಾರಗಳು ಇಂತಹ ಆರೋಪಿಗಳಿಗೆ ಕಠಿಣ ಶಿಕ್ಷೆ ನೀಡಬೇಕು ಕಾನೂನಿನ ಭಯ ಇಲ್ಲದಾಗ ಮಾತ್ರಇಂತಹ ಘಟನೆಗಳು ನಡೆಯಲು ಸಾಧ್ಯ, ಕಾಲೇಜು ಕ್ಯಾಂಪಸ್‌ಗಳು ಸುರಕ್ಷತೆಯ ಕೇಂದ್ರಗಳಾಗಬೇಕು, ಈ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಗಮನಹರಿಸಬೇಕು ಹಾಗೂ ಉನ್ನತ ಮಟ್ಟದತನಿಖೆ ಮಾಡಬೇಕು, ಅಗತ್ಯ ಎಂದು ಕಂಡರೆ ಪ್ರಕರಣದ ತನಿಖೆಯನ್ನು ಅಃಖ ಗೆ ಹಸ್ತಾಂತರ ಮಾಡಬೇಕೆಂದು ಎಬಿವಿಪಿ ಅಗ್ರಹಿಸುತ್ತದೆ. ಈ ಸಂದರ್ಭದಲ್ಲಿ ರಾಜ್ಯ ಕಾರ್ಯಕಾರಿಣಿ ಸದಸ್ಯ-ಕನಕರಾಜ್ ಕೋಡಿಹಳ್ಳಿ, ನಗರ ಕಾರ್ಯದರ್ಶಿ-ಗೋಪಿ, ವಿದ್ಯಾರ್ಥಿನಿ ಪ್ರಮುಖ್-ಚೈತ್ರ, ತಾಲ್ಲೂಕು ಸಂಚಾಲಕ-ದರ್ಶನ್, ಸಹ ಸಂಚಾಲಕ-ಸುಮನ್, ಸಾಮಾಜಿಕ ಜಾಲತಾಣ-ಚಿತ್ರಸ್ವಾಮಿ, ಕಾರ್ಯಕರ್ತರು ಸುದೀಪ್, ಸಂಜನ, ಚೈತ್ರ, ಯುವರಾಜ್, ದಾನೇಶ್, ಸುಮ, ಚಂದನ ಮತ್ತು ತಿಪ್ಪೇಸ್ವಾಮಿ ಇನ್ನು ಇತರರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ದಲಿತರಿಗೆ ಕಾರಜೋಳ ಮಗ್ಗಲಮುಳ್ಳು: ಅನಂತನಾಯ್ಕ

» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಎನ್ ಡಿಎ ಮೈತ್ರಿ ಕೂಟದ ಬಿಜೆಪಿ ಅಭ್ಯರ್ಥಿ ಗೋವಿಂದ ಎಂ. ಕಾರಜೋಳ ದಲಿತರಿಗೆ ಮಗ್ಗಲ ಮುಳ್ಳು. ಸಮಾಜ ಕಲ್ಯಾಣ ಸಚಿವರಾಗಿದ್ದಾಗಎಲ್ಲಸಮುದಾಯಗಳನ್ನು ಸಮಾನತೆಯಿಂದ ನೋಡಲಿಲ್ಲ. ಸಮಾನತೆಯ ದೃಷ್ಟಿ ಅವರಿಗಿಲ್ಲ ಎಂದು ವಕೀಲ ಎನ್.ಅನಂತನಾಯ್ಕ ವಾಗ್ದಾಳಿ ನಡೆಸಿದರು.

ನಗರದ ದುರ್ಗದ ಸಿರಿ ಸಭಾಂಗಣದಲ್ಲಿ ಆಯೋಜಿಸಿದ್ದ ಬಂಜಾರ, ಭೋವಿ, ಕೊರಚ, ಕೊರಮ, ಅಲೆಮಾರಿ ಸಮುದಾಯಗಳ ಮುಖಂಡರ ಜಿಲ್ಲಾ ಸಮಾರಂಭದಲ್ಲಿ ಮಾತನಾಡಿದ ಅವರು, ಗೋವಿಂದ ಕಾರಜೋಳ ಅವರು ಸಮಾಜ ಕಲ್ಯಾಣ ಸಚಿವರಾಗಿದ್ದಾಗ ಎಲ್ಲ ಸಮುದಾಯಗಳನ್ನು ಸಮಾನತೆಯಿಂದ ನೋಡಲಿಲ್ಲ. ಅವರಿಗೆ ಸಮಾನತೆ, ಸಂವಿಧಾನದ ಬಗ್ಗೆ ಕಾಳಜಿ ಇಲ್ಲ. ಹಾಗಾಗಿ ಯಾವ ಕಾರಣಕ್ಕೂ ಅವರನ್ನು ಬಂಜಾರ, ಭೋವಿ, ಕೊರಚ, ಕೊರಮ, ಅಲೆಮಾರಿ ಸಮುದಾಯಗಳು ಬೆಂಬಲಿಸಬಾರದು



ಎಂದು ಹೇಳಿದರು. ಸ್ವಾತಂತ್ರ್ಯ ಬಂದ ನಂತರ ಡಾ.ಬಿ.ಆರ್.ಅಂಬೇಡ್ಕರ್ ಅವರು ಅನುಮೋದಿಸಲ್ಪಟ್ಟ ಪರಿಶಿಷ್ಟ ಜಾತಿಯ ಪಟ್ಟಿಯಲ್ಲಿ ಆದಿ ಕರ್ನಾಟಕ, ಆದಿ ದ್ರಾವಿಡ ಭೋವಿ ಲಂಬಾಣಿ, ಕೊರಚ, ಕೊರಮ ಜಾತಿಗಳಿದ್ದವು. ಆದರೆ ಇತ್ತೀಚಿನ ದಿನಗಳಲ್ಲಿ ಈ ಜಾತಿಗಳನ್ನು ಪರಿಶಿಷ್ಟ ಪಟ್ಟಿಯಿಂದ ತೆಗೆಯಬೇಕು ಎನ್ನುವ ಉದ್ದೇಶದಿಂದ ಹೈಕೋರ್ಟ್ ಮತ್ತು ಸುಪ್ರೀಂ ಕೋರ್ಟ್‌ನಲ್ಲಿ ಪ್ರಕರಣ ದಾಖಲಿಸಿ, ಜನರ ಮಧ್ಯೆ ಗೊಂದಲ ಸೃಷ್ಟಿಸುವುದರ ಜೊತೆಗೆ ನ್ಯಾಯಾಲಯದ ಸಮಯವನ್ನು ಹಾಳು ಮಾಡುತ್ತಿದ್ದಾರೆ. ಅಂತವರ ಕುತಂತ್ರಕ್ಕೆ ಕಿವಿ ಕೊಡಬಾರದು ಎಂದರು.

ಭೋವಿ ಸಮುದಾಯದ ಹಿರಿಯ ಮುಖಂಡ ಡಾ.ರವಿ ಮಾಕಳಿ ಮಾತನಾಡಿ, ವಿವಿಧ ಆಯೋಗ, ಸಮಿತಿ, ಕೋರ್ಟ್‌ಗೆ ಅರ್ಜಿಗಳ ಮೂಲಕ ಬಂಜಾರ, ಭೋವಿ, ಕೊರಚ, ಕೊರಮ ಅಲೆಮಾರಿ ಸಮುದಾಯಗಳನ್ನು ಪರಿಶಿಷ್ಠ ಜಾತಿ ಮೀಸಲಾತಿಯಿಂದ ಹೊರ ಹಾಕಿಸಲು ನಿರಂತರವಾಗಿ ಷಡ್ಯಂತರ ಮಾಡಿಸುತ್ತಲೇ ಬಂದಿರುವ ಗೋವಿಂದ ಕಾರಜೋಳ ಅವರನ್ನು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಜನತೆ ತಿರಸ್ಕರಿಸಬೇಕು. ಈ ಅಪಾಯಕಾರಿ ವ್ಯಕ್ತಿ ಗೆದ್ದರೆ ಮತ್ತೆ ನಮ್ಮ ಸಮುದಾಯಗಳಿಗೆ ತೊಂದರೆ ಆಗುತ್ತದೆ. ಸಂಸತ್ ಗೆ ಹೋಗದಂತೆ ಈ ಸಂವಿಧಾನ ವಿರೋಧಿ ವ್ಯಕ್ತಿಯನ್ನು ಸೋಲಿಸಬೇಕು. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಜನತೆ ಮತ್ತು ಬಂಧುಗಳು ತುಂಬಾ ಮುತುವರ್ಜಿಯಿಂದ ಈ ಚುನಾವಣೆಯಲ್ಲಿ ಭಾಗವಹಿಸಿ ಮತ ಚಲಾಯಿಸಲು ಕೋರಿದರು.ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಚಂದ್ರಪ್ಪ ಮಾತನಾಡಿ, ಸಂವಿಧಾನದ ಉಳಿವಿಗಾಗಿ ಮತ್ತು ಸಮಾನತೆಯ ಪರವಾಗಿ ಇರುತ್ತೇನೆ ಕೆಲಸ ಮಾಡುತ್ತೇನೆ ಎಂದು ಹೇಳಿದರು.ಸಭೆಯಲ್ಲಿರಾಘವೇಂದ್ರನಾಯ್ಕ, ಡಾ. ರಾಜನಾಯ್ಕ, ವೆಂಕಟೇಶ ಜಡ್ಜ್, ಭೋವಿ ಸಮಾಜದ ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ, ಜಯದೇವ ನಾಯ್ಕ, ನಾಗೇಂದ್ರ ನಾಯ್ಕ, ಭೋವಿ ನಿಗಮದ ಮಾಜಿ ನಿರ್ದೇಶಕ ಗೋಡೆಮನೆ ಹನಮಂತಪ್ಪ, ಅನಿಲ್ ನಾಯ್ಕ, ಅನಂತಮೂರ್ತಿ ನಾಯ್ಕ, ತುಳಸಿ ರಮೇಶ್, ಲಿಂಗಾನಾಯ್ಕ, ರಾಜನಾಯ್ಕ ಉಪಸ್ಥಿತರಿದ್ದರು. ಅರುಣ್ ನರೇನಹಳ್ಳಿ , ಪ್ರಕಾಶ್‌ನಿರ್ವಹಣೆ ಮಾಡಿದರು.

## ಫಾಸ್ಟ್ ನ್ಯೂಸ್

### ಏ.22 ಮತ್ತು 23ರಂದು ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

» ಚಿತ್ರದುರ್ಗ

ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ವಿಭಾಗದ ಅಧಿಕಾರಿಗಳು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ತಾಲ್ಲೂಕುಗಳಿಗೆ ಇದೇ ಏಪ್ರಿಲ್ 22 ಮತ್ತು 23ರಂದು ಖುದ್ದಾಗಿ ಭೇಟಿ ನೀಡಿ ಸಾರ್ವಜನಿಕರಿಂದ ಅವಹಾಲುಗಳನ್ನು ಸ್ವೀಕರಿಸಲಿದ್ದಾರೆ.ಏಪ್ರಿಲ್ 22ರಂದು ಬೆಳಿಗ್ಗೆ 10 ರಿಂದ 1 ಗಂಟೆಯವರೆಗೆ ಹೊಸದುರ್ಗ, ಮೊಳಕಾಲ್ಮೂರು ತಾಲ್ಲೂಕು ಕಚೇರಿ ಹಾಗೂ ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ಹೊಳಲ್ಕೆರೆ ತಾಲ್ಲೂಕು ಕಚೇರಿಗಳಲ್ಲಿ ಅಹವಾಲು ಸ್ವೀಕರಿಸಲಿದ್ದಾರೆ. ಏ.23ರಂದು ಬೆಳಿಗ್ಗೆ 10 ರಿಂದ 1.30 ರವರೆಗೆ ಹಿರಿಯೂರು ತಾಲ್ಲೂಕು ಕಚೇರಿ, ಬೆಳಿಗ್ಗೆ 10 ರಿಂದ 1 ಗಂಟೆಯವರೆಗೆ ಚಳ್ಳಕೆರೆ ತಾಲ್ಲೂಕು ಕಚೇರಿ ಹಾಗೂ ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ಚಿತ್ರದುರ್ಗ ತಾಲ್ಲೂಕು ಕಚೇರಿಯಲ್ಲಿ ಅಹವಾಲು ಸ್ವೀಕರಿಸಲಿದ್ದಾರೆ.ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಮಾಡಿಕೊಡಲು ಲಂಚಕ್ಕಾಗಿ ಬೇಡಿಕೆ, ಯೋಜನೆಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬ, ಕರ್ತವ್ಯದಲ್ಲಿ ನಿರ್ಲಕ್ಷತನ, ತಾರತಮ್ಯ ತೋರುವುದು ಸೇರಿದಂತೆ ಇತ್ಯಾದಿ ವಿಷಯಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ನಿಗಧಿತ ನಮೂನೆ 1 ಮತ್ತು 2ರಲ್ಲಿ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಚಿತ್ರದುರ್ಗ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮತದಾನದ ದಿನ ಹಾಗೂ ಮತ ಎಣಿಕೆ ದಿನದಂದು ಸಂತೆ, ಜಾತ್ರೆ ನಿಷೇಧ

» ಚಿತ್ರದುರ್ಗ

ಲೋಕಸಭಾ ಚುನಾವಣೆ-2024ರ ಹಿನ್ನಲೆಯಲ್ಲಿ ಇದೇ ಏಪ್ರಿಲ್ 26ರಂದು ಮತದಾನದ ದಿನ ಹಾಗೂ ಜೂನ್ 4ರಂದು ಮತ ಎಣಿಕೆ ದಿನದಂದು ಬೆಳಿಗ್ಗೆ 5 ರಿಂದ ಸಂಜೆ 7 ರವರೆಗೆ ಚಿತ್ರದುರ್ಗ ಜಿಲ್ಲೆಯಾದ್ಯಂತ ನಡೆಯಲಿರುವ ಎಲ್ಲಾ ಬಗೆಯ ಸಂತೆ, ಜಾತ್ರೆ, ಉತ್ಸವ ನಡೆಸದಂತೆ ನಿಷೇಧಿಸಿ ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ. ಲೋಕಸಭಾ ಚುನಾವಣೆಯನ್ನು ಸುಸೂತ್ರವಾಗಿ ನಡೆಸಲು ಮತ್ತು ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಠಿಯಿಂದ ಜಿಲ್ಲೆಯಾದ್ಯಂತ ಏಪ್ರಿಲ್ 26 ರಂದು ಮತದಾನದ ದಿನ ಹಾಗೂ ಜೂನ್ 4ರಂದು ಮತ ಎಣಿಕೆ ದಿನದಂದು ನಡೆಯುವ ಸಂತೆ, ಜಾತ್ರೆ ಹಾಗೂ ಉತ್ಸವವನ್ನು ನಿಷೇಧಿಸಿ ಜಿಲ್ಲಾಧಿಕಾರಿ, ಜಿಲ್ಲಾ ದಂಡಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಟಿ.ವೆಂಕಟೇಶ್ ಆದೇಶ ಹೊರಡಿಸಿದ್ದಾರೆ.

### ಏ.22ರಂದು ಭೂಮಿ ದಿನಾಚರಣೆ: ಸಸಿ ನೆಡುವ ಕಾರ್ಯಕ್ರಮ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಕರ್ನಾಟಕ ಅರಣ್ಯ ಇಲಾಖೆ, ಸರ್ಕಾರಿ ಕಲಾ ಕಾಲೇಜು ಇವರುಗಳ ಸಂಯುಕ್ತಾಶ್ರಯದಲ್ಲಿ ಭೂಮಿ ದಿನಾಚರಣೆ ಅಂಗವಾಗಿ ಸಸಿ ನೆಡುವ ಕಾರ್ಯವನ್ನು ಇದೇ ಏಪ್ರಿಲ್ 22ರಂದು ಬೆಳಿಗ್ಗೆ 9.30ಕ್ಕೆ ಚಿತ್ರದುರ್ಗ ನಗರದ ಆಡುಮಲ್ಲೇಶ್ವರ ಮೃಗಾಲಯದಲ್ಲಿ ಆಯೋಜಿಸಲಾಗಿದೆ.ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಕೆ.ಬಿ.ಗೀತಾ ಕಾರ್ಯಕ್ರಮ ಉದ್ಘಾಟಿಸುವರು. ಚಿತ್ರದುರ್ಗ ವಿಭಾಗ ಉಪ ಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಸ್.ಎನ್.ಕಲ್ಕಣಿ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಕೆಂಪರಾಜು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜೆಎಂಎಫ್‌ಸಿ 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಚೈತ್ರಾ, ಉಜ್ವಲ ವೀರಣ್ಣ ಸಿದ್ದಣ್ಣವರ್, ನೇಮಚಂದ್ರ, 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಅನಿತಾ ಕುಮಾರಿ, 3ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶೆ ಸಹನ ಆರ್ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ವಿವಿಧ ಇಲಾಖೆಯಲ್ಲಿ ಖಾಲಿ ಇರುವ ಕಿರಿಯ ಗುಮಾಸ್ತ, ಕಿರಿಯ ಸಹಾಯಕ ಕಾರ್ಯದರ್ಶಿ ಮತ್ತು ದತ್ತಾಂಶ ನಮೂದಕ ಹುದ್ದೆಗಳ ಭರ್ತಿಗಾಗಿ ಸಿಬ್ಬಂದಿ ನೇಮಕಾತಿ ಆಯೋಗದ ವತಿಯಿಂದ ಕಂಬೈನ್ಡ್ ಹೈಯರ್ ಸೆಕೆಂಡರಿ (10+2) ಲೆವೆಲ್ ಪರೀಕ್ಷೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಯು ಕಂಪ್ಯೂಟರ್ ಆಧಾರಿತವಾಗಿದ್ದು, ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ https://ssc.gov.in or www.sskkr.kar.nic.in ಮೂಲಕ ಅರ್ಜಿ ಸಲ್ಲಿಸಬಹುದು ವಯೋಮಿತಿ 18 ರಿಂದ 27 ವರ್ಷಗಳು ಅರ್ಜಿ ಸಲ್ಲಿಸಲು ಮೇ.7 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ: 080-25502520 ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ದಾವಣಗೆರೆ ಸಂಪರ್ಕಿಸಿ.

---

#### ಮತಗಟ್ಟೆ ಅಧಿಕಾರಿಗಳಿಗೆ ಎರಡನೇ ಹಂತದ ತರಬೇತಿ; ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಲಹೆ

# ಒತ್ತಡ ರಹಿತವಾಗಿ ಮತದಾನದ ಕಾರ್ಯ ನಿರ್ವಹಿಸಿ

» ಚಿತ್ರದುರ್ಗ

ಮತದಾನ ಸೇರಿದಂತೆ ಚುನಾವಣೆ ಕಾರ್ಯಕ್ಕೆ ನೇಮಕಗೊಂಡ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಒತ್ತಡ ರಹಿತವಾಗಿ ಚುನಾವಣೆ ಕಾರ್ಯ ನಿರ್ವಹಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಲಹೆ ನೀಡಿದರು.

ನಗರದ ಸರ್ಕಾರಿ ಕಲಾ ಕಾಲೇಜಿನಲ್ಲಿ ಶನಿವಾರ ಮತಗಟ್ಟೆ ಅಧಿಕಾರಿಗಳಿಗೆ ಆಯೋಜಿಸಲಾಗಿದ್ದ ಎರಡನೇ ಹಂತದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ಚಿತ್ರದುರ್ಗ ಲೋಕಸಭಾಕ್ಷೇತ್ರ ಚುನಾವಣೆಯಲ್ಲಿ ಇವಿಎಂನಲ್ಲಿ ಎರಡು ಬ್ಯಾಲೆಟ್ ಯನಿಟ್‌ಗಳು ಇರಲಿವೆ. ಇವುಗಳನ್ನು ಕಂಟ್ರೋಲ್ ಯುನಿಟ್ ಹಾಗೂ ವಿವಿಪ್ಯಾಟ್ ಸರಿಯಾದ ರೀತಿಯಲ್ಲಿ ಜೋಡಿಸಬೇಕು. ಯಾವುದೇ ಗೊಂದಲಕ್ಕೆ ಅವಕಾಶ ನೀಡಬಾರದು. ತರಬೇತಿಯಲ್ಲಿ ಮತಗಟ್ಟೆ ಅಧಿಕಾರಿಗಳಿಗೆ ಕೈಪಿಡಿ, ಚೆಕ್ ಲೀಸ್ಟ್‌ಗಳನ್ನೂ ವಿತರಿಸಲಾಗುತ್ತದೆ. ಮತದಾನ ಪೂರ್ವ ದಿನ ಮಸ್ಟರಿಂಗ್‌ನಲ್ಲಿ ನಿರ್ವಹಿಸಬೇಕಾದ ಕಾರ್ಯಗಳು, ಮತದಾನದ ದಿನ ಅಣಕು ಮತದಾನ, ಮತದಾನ ಪ್ರಕ್ರಿಯೆ ನಡೆಸುವ ರೀತಿ ಹಾಗೂ ಮತದಾನವನ್ನು ಪೂರ್ಣಗೊಳಿಸಿ, ಡಿಮಸ್ಟರಿಂಗ್‌ನಲ್ಲಿ ಇವಿಎಂ ಸಹಿತ ಇತರೆ



ದಾಖಲೆಗಳನ್ನು ಹಸ್ತಾಂತರಿಸುವ ಬಗ್ಗೆ ಕೂಲಂಕುಷವಾಗಿ ತರಬೇತಿ ಮಾಹಿತಿ ನೀಡಲಾಗುವುದು ಎಂದರು. ಚುನಾವನಾ ಕರ್ತವ್ಯಕ್ಕೆ ನಿಯೋಜನೆಗೊಂಡ ಸಿಬ್ಬಂದಿಗಳು ಚುನಾವಣೆ ಕಾರ್ಯವನ್ನು ಒತ್ತಡ ಎಂದು ಭಾವಿಸುವ ಬದಲು ಸಂತಸದಿಂದ ಕಾರ್ಯ ನಿರ್ವಹಿಸಿ. ಎಲ್ಲಾ ಹಂತದ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಚುನಾವಣೆ ಆಯೋಗದದಿಂದ ಈ ಬಾರಿ ನಿರ್ವಹಿಸಬೇಕಾದ ಕಾರ್ಯಗಳು, ಮುಚ್ಚಿದ ಲಕೋಟೆ ಹಾಗೂ ತೆರದ ಲಕೋಟೆಯಲ್ಲಿ ಒಪ್ಪಿಸಬೇಕಾದ ಬಗ್ಗೆ ಸ್ಪಷ್ಟ ನಿಯಮ ರೂಪಿಸಲಾಗಿದೆ. ಇದಕ್ಕಾಗಿ ವಿವಿಧ ಬಣ್ಣದ ಲಕೋಟೆಗಳನ್ನು ನಿರ್ಧರಿಸಲಾಗಿದೆ. ಹೆಚ್ಚುವರಿ ಲಕೋಟೆಗಳನ್ನು ಸಹ ವಿತರಿಸಲಾಗುವುದು. ಏಪ್ರಿಲ್ 25 ಮಸ್ಟರಿಂಗ್ ದಿನ ಹಂಚಿಕೆಯಾದ ಮತಗಟ್ಟೆ ಬಗ್ಗೆ ತಿಳಿಸಲಾಗುವುದು ಎಂದರು.

ಮತಗಟ್ಟೆಗಳಲ್ಲಿ ಅಕ್ಷರ ದಾಸೋಹದ ಅಧಿಕಾರಿಗಳು ಊಟದ ವ್ಯವಸ್ಥೆ ಮಾಡಲಿದ್ದಾರೆ. ಇದಕ್ಕಾಗಿ ಊಟದ ಮೆನುವನ್ನೂ ಸಿದ್ದಪಡಿಸಲಾಗಿದೆ. ಆರೋಗ್ಯ ಸಂಬಂಧಿ ವಿಚಾರಗಳ ಮೇಲ್ವಿಚಾರಣೆಗೆ ಆಯಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಮಹಿಳಾ ಸಿಬ್ಬಂದಿ ಸಹಾಯಕ್ಕಾಗಿ ಸಿಡಿಪಿಓಗಳನ್ನುನೋಡಲ್‌ಅಧಿಕಾರಿಗಳಾಗಿ ನೇಮಿಸಲಾಗಿದೆ. ಯಾವುದೇ ಪಕ್ಷದ ಅಭ್ಯರ್ಥಿಗಳು ಮತಗಟ್ಟೆ ಸಿಬ್ಬಂದಿಗೆ ಆಹಾರ ಸರಬರಾಜು ಮಾಡುವುದನ್ನು ಕಡ್ಡಾಯವಾಗಿ ನಿರ್ಬಂಧಿಸಲಾಗಿದೆ. ಮತಗಟ್ಟೆ ಕಾರ್ಯಕ್ಕೆ ನೇಮಕವಾದವರು ನೀಡಿದ್ದ 12ಎ ಫಾರಂಗಳಿಗೆ ಇಂದು ಇಡಿಸಿ (ಚುನಾವಣೆ ಕರ್ತವ್ಯ ಪ್ರಮಾಣ ಪತ್ರ) ನೀಡಲಾಗುವುದು. ಇಡಿಸಿ ಪ್ರಮಾಣ ಪತ್ರವನ್ನು ಕರ್ತವ್ಯ ನಿರತ ಮತಗಟ್ಟೆಗಳಿಗೆ ತೆಗೆದುಕೊಂಡು ಹೋಗಿ, ಅಲ್ಲೇ ತಮ್ಮ ಮತದಾನ ಮಾಡಬಹುದು ಎಂದರು.

ತರಬೇತಿ ಕಾರ್ಯ ವೀಕ್ಷಣೆಗೆ ಆಗಮಿಸಿದ ಚಿತ್ರದುರ್ಗ ಲೋಕಸಭಾ ಕ್ಷೇತ್ರ ಸಾಮಾನ್ಯ ವೀಕ್ಷಕ ಮನೋಹರ ಮರಂಡಿ ಮಾತನಾಡಿ, ಮತಗಟ್ಟೆ ಅಧಿಕಾರಿಗಳು ಮತದಾನ ಆರಂಭಕ್ಕೂ ಮುನ್ನ ಅಣಕು ಮತದಾನ ನಡೆಸುವುದು ಕಡ್ಡಾಯವಾಗಿದೆ. ತರುವಾಯ ಕಂಟ್ರೋಲ್ ಯುನಿಟ್‌ನಲ್ಲಿ ಅಣಕು ಮತದಾನ ವಿವರವನ್ನು ಅಳಿಸಬೇಕು. ವಿವಿ ಪ್ಯಾಟ್‌ನಲ್ಲಿ ಸಂಗ್ರಹವಾದ ಅಣಕು ಮತದಾನ ಖಾತ್ರಿ ಚೀಟಿಗಳನ್ನು ಹೊರತೆಗದು, ಕ್ರಮಬದ್ಧವಾಗಿ ವಿವಿಪ್ಯಾಟ್‌ನ್ನು ಸೀಲ್ ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ಸಹಾಯಕ ಚುನಾವಣಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಡಾ.ನಾಗವೇಣಿ, ನಗರಸಭೆ ಆಯುಕ್ತೆ ಎಂ.ರೇಣುಕಾ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸೇರಿದಂತೆ ಮತ್ತಿತರು ಇದ್ದರು. ಎರಡನೇ ಹಂತದ ಚುನಾವಣೆ ತರಬೇತಿ ಅಂಗವಾಗಿ ಶನಿವಾರ 6 ವಿಧಾನ ಸಭಾ ಕ್ಷೇತ್ರಗಳಲ್ಲಿ ಮತಗಟ್ಟೆ ಅಧಿಕಾರಿ, ಸಹಾಯಕ ಮತಗಟ್ಟೆ ಅಧಿಕಾರಿ, ಮತದಾನ ಅಧಿಕಾರಿ ಸೇರಿದಂತೆ ಸಖಿ, ವಿಕಲಚೇತನ ಹಾಗೂ ಯುವ ಮತಗಟ್ಟೆಗಳ 7864 ಸಿಬ್ಬಂದಿಗಳಿಗೆ ಆಯಾ ತಾಲ್ಲೂಕು ಕೇಂದ್ರಗಳಲ್ಲಿ ತರಬೇತಿ ನೀಡಲಾಯಿತು.

---

# ಮೋದಿ ಗ್ಯಾರೆಂಟಿ ಸಂಕಲ್ಪ ಪತ್ರ ಬಿಡುಗಡೆ



» ಚಿತ್ರದುರ್ಗ

ಕಾಂಗ್ರೆಸ್ ಗ್ಯಾರೆಂಟಿಗಳು ಹರ್ಷದ ಕೂಳು, ಬಿಜೆಪಿ. ಗ್ಯಾರೆಂಟಿಗಳು ವರ್ಷದ ಕೂಳು, ಹತ್ತು ವರ್ಷಗಳ ಕಾಲ ದೇಶದ ಪ್ರಧಾನಿಯಾಗಿದ್ದ ನರೇಂದ್ರಮೋದಿರವರು ನುಡಿದಂತೆ ನಡೆದಿದ್ದಾರೆ. ಹಾಗಾಗಿ ಕಾಂಗ್ರೆಸ್‌ನ ಚುನಾವಣಾ ಅಕ್ರಮ, ಸುಳ್ಳು ಗ್ಯಾರೆಂಟಿಗಳಿಗೆ ಬಲಿಯಾಗಬೇಡಿ ಎಂದು ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್ ಜನತೆಯಲ್ಲಿ ಮನವಿ ಮಾಡಿದರು.

ಬಿಜೆಪಿ. ಕಾರ್ಯಾಲಯದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮೋದಿ ಗ್ಯಾರೆಂಟಿ ಸಂಕಲ್ಪ ಪತ್ರ ಬಿಡುಗಡೆಗೊಳಿಸಿ ಮಾತನಾಡುತ್ತ ಬಿಜೆಪಿ. ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಪ್ರಧಾನಿ ನರೇಂದ್ರಮೋದಿ, ಅಮಿತ್‌ಷಾ, ರಾಜನಾಥ್‌ಸಿಂಗ್ ಇವರುಗಳ ನಲವತ್ತು ಮಂದಿಯ ತಂಡ 2047 ರವರೆಗೆ ಭವ್ಯ ಭಾರತದ ಭವಿಷ್ಯವನ್ನು ಗುರಿಯಾಗಿರಿಸಿಕೊಂಡು ಸಂಕಲ್ಪ ಪತ್ರ ಬಿಡುಗಡೆಗೊಳಿಸಿದೆ. 1952 ರ ಜನಸಂಘದ ಪ್ರಣಾಳಿಕೆಯಲ್ಲಿ ಜಮ್ಮು-ಕಾಶ್ಮೀರದಲ್ಲಿ ಆರ್ಟಿಕಲ್ 370 ರದ್ದುಪಡಿಸುವುದಾಗಿ ಘೋಷಿಸಿತ್ತು. ಅಯೋಧ್ಯೆಯಲ್ಲಿ ಶ್ರೀರಾಮ ಮಂದಿರ ನಿರ್ಮಿಸುವುದಾಗಿಯೂ ಭರವಸೆ ನೀಡಿತ್ತು. ಅದರಂತೆ ಎರಡೂ ಈಡೇರಿವೆ. ರಾಜ್ಯ ಕಾಂಗ್ರೆಸ್ ಸರ್ಕಾರದ ಐದು ಗ್ಯಾರೆಂಟಿಗಳಿಂದ ದಿವಾಳಿಯಾಗಿದೆ.ಕೇಂದ್ರದಲ್ಲಿಕಾಂಗ್ರೆಸ್‌ಅಧಿಕಾರಕ್ಕೆ ಬಂದರೆ ಇನ್ನು 25 ಗ್ಯಾರೆಂಟಿಗಳನ್ನು ದೇಶದ ಜನರಿಗೆ ನೀಡುವುದಾಗಿ ವಾಗ್ದಾನ ಮಾಡಿದ್ದಾರೆ. ಇದರಿಂದ ದೇಶ ದಿವಾಳಿಯಾಗುವುದರಲ್ಲಿ ಅನುಮಾನವಿಲ್ಲ ಎಂದು ಹಾಸ್ಯ ಮಾಡಿದರು.

ದೇಶದ ಸುರಕ್ಷತೆ,ಆರ್ಥಿಕವಾಗಿ ಹಿಂದುಳಿದವರ ಸಬಲೀಕರಣ, ಮಧ್ಯಮ ವರ್ಗಕ್ಕೆ ಲಾಭವಾಗುವ ಯೋಜನೆಗಳು, ನಾರಿಶಕ್ತಿ ಸಬಲೀಕರಣ, ರೈತರ ಗ್ಯಾರೆಂಟಿ, ಯುವಕರ ಗ್ಯಾರೆಂಟಿ, ಹಿರಿಯ ನಾಗರೀಕರ ಬದುಕು ಸುಧಾರಣೆಗೆ ಪೋರ್ಟಲ್, ಶ್ರಮಿಕ ಬಂಧುಗಳಿಗೆ ರಾಷ್ಟ್ರೀಯ ಕನಿಷ್ಠ ವೇತನ ನೀತಿ, ವಿಶ್ವಬಂಧು ಯೋಜನೆ, ಸಮೃದ್ದ ಭಾರತ, ಮೂಲಭೂತ ಸೌಕರ್ಯ, ಸಾಂಸ್ಕೃತಿಕ ಪರಂಪರೆ ಎತ್ತಿ ಹಿಡಿಯುವುದು, ಭ್ರಷ್ಟಾಚಾರವಿಲ್ಲದ ಉತ್ತಮ ಆಡಳಿತ ನೀಡುವುದು ಸಂಕಲ್ಪ ಪತ್ರದ ಪ್ರಮುಖ ಯೋಜನೆಗಳಾಗಿವೆ. 25 ಲಕ್ಷ ಕೋಟಿ ಯೋಜನೆ ಕೊಡಲು ಕಾಂಗ್ರೆಸ್‌ನಿಂದ ಆಗಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಮಿಷಗಳಿಗೆ ಬಲಿಯಾಗದಂತೆ ಕೆ.ಎಸ್.ನವೀನ್ ಮತದಾರರಲ್ಲಿ ವಿನಂತಿಸಿದರು.

ನಗರಸಭೆ ಸದಸ್ಯರುಗಳಾದ ಸುರೇಶ್, ಹರೀಶ್, ಬಿಜೆಪಿ. ಉಪಾಧ್ಯಕ್ಷ ಶಿವಣ್ಣಾಚಾರ್, ರವಿಕುಮಾರ್, ಪರಮೇಶ್, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ವೀರೇಶ್, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್ ಬೇದ್ರೆ ಪತ್ರಿಕಾಗೋಷ್ಠಿಯಲ್ಲಿದ್ದರು.

## ಮಂದಕೃಷ್ಣ ಮಾದಿಗ ಹೇಳಿಕೆಗೆ ಸಂಘರ್ಷ ಸಮಿತಿ ಖಂಡನೆ



» ಚಿತ್ರದುರ್ಗ

ನರೇಂದ್ರಮೋದಿ ಮೂರನೆ ಬಾರಿಗೆದೇಶದಪ್ರಧಾನಿಯಾದಾಗ ಮಾತ್ರ ಮಾದಿಗರ ಮೀಸಲಾತಿ ವರ್ಗಿಕರಣ ಸಾಧ್ಯ ಎಂದು ಮಾದಿಗರ ಮೀಸಲಾತಿ ವರ್ಗಿಕರಣ ಹೋರಾಟ ಸಮಿತಿ ರಾಷ್ಟ್ರೀಯ ಅಧ್ಯಕ್ಷ ಮಂದಕೃಷ್ಣ ಮಾದಿಗ ನೀಡಿರುವ ಹೇಳಿಕೆಯನ್ನು ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಕೆ.ಕುಮಾರ್ ತೀವ್ರವಾಗಿ ಖಂಡಿಸಿದರು.

ಪತ್ರಕರ್ತರ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಡಿಯಲ್ಲಿ ಕಳೆದ ಮೂವತ್ತು ನಲವತ್ತು ವರ್ಷಗಳಿಂದಲೂ ಹೋರಾಟ ಮಾಡಿಕೊಂಡು ಬರುತ್ತಿದ್ದೇವೆ. ಇದುವರೆವಿಗೂ ಆಗಿಲ್ಲ. ಏಕಾಏಕಿ ಮಂದಕೃಷ್ಣ ಮಾದಿಗ ಚಿತ್ರದುರ್ಗದಲ್ಲಿ ಪತ್ರಿಕಾಗೋಷ್ಠಿ ನಡೆಸಿ ನರೇಂದ್ರಮೊದಿಗೆ ಈ ಬಾರಿಯ ಚುನಾವಣೆಯಲ್ಲಿ ಬೆಂಬಲಿಸುವುದಾಗಿ ಹೇಳಿ ದಲಿತರನ್ನು ದಿಕ್ಕು ತಪ್ಪಿಸುವ ಕುತಂತ್ರ ನಡೆಸುತ್ತಿದ್ದಾರೆ. ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ. ಕೇಂದ್ರಕ್ಕೆ ವರದಿ ಶಿಫಾರಸ್ಸು ಮಾಡಲಿಲ್ಲ. ದಲಿತರ ಓಟುಗಳನ್ನು ತೆಗೆದುಕೊಳ್ಳುವುದಕ್ಕಾಗಿ ಬಿಜೆಪಿ. ಮಂದಕೃಷ್ಣ ಮಾದಿಗ ಮೂಲಕ ಇಂತಹ ಹೇಳಿಕೆ ಕೊಡಿಸುತ್ತಿದೆ. ಇದು ವೈಯಕ್ತಿಕ ಲಾಭ ಬಿಟ್ಟರೆ ದಲಿತರಿಗೇನು ಅನುಕೂಲವಿಲ್ಲ ಎಂದು ತಿರುಗೇಟು ನೀಡಿದರು. ಬಿಜೆಪಿ. ಸರ್ಕಾರ ಅಧಿಕಾರಕ್ಕೆ ಬಂದಿರುವುದೇ ಸಂವಿಧಾನವನ್ನು ಬದಲಾವಣೆ ಮಾಡುವುದಕ್ಕಾಗಿ ಎನ್ನುವ ಬಹಿರಂಗ ಹೇಳಿಕೆ ನೀಡಿದಾಗ ಧ್ವನಿ ಎತ್ತದ ಮಂದಕೃಷ್ಣ ಮಾದಿಗ ಈಗ ಕೋಮುವಾದಿಗಳನ್ನು ಓಲೈಸುವ ಹುನ್ನಾರ ನಡೆಸುತ್ತಿರುವುದಕ್ಕೆ ಮಾದಿಗರು ಲೋಕಸಭೆ ಚುನಾವಣೆಯಲ್ಲಿಎಚ್ಚೆತ್ತುಕೊಂಡು ಮತ ಚಲಾಯಿಸುವಂತೆ ಮನವಿ ಮಾಡಿದರು.

## ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರತಿಷ್ಟಿತ ಖಾಸಗಿ ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ಕಲ್ಪಿಸಲು ಅರ್ಜಿ ಆಹ್ವಾನಿಸಿದೆ. ವಿದ್ಯಾರ್ಥಿಯು 5 ನೇ ತರಗತಿಯಲ್ಲಿ ಶೇ.60% ಕ್ಕಿಂತ ಹೆಚ್ಚು ಅಂಕ ಪಡೆದು ಉತ್ತೀರ್ಣರಾಗಿರಬೇಕು. ಪೋಷಕರ ವಾರ್ಷಿಕ ವರಮಾನ ರೂ.2,00.000/- ಮೀರಬಾರದು. ಸಂಬಂಧಿಸಿದ ಅರ್ಜಿಯೊಂದಿಗೆ ದೃಢೀಕರಿಸಿದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಗ್ರಾಮೀಣ ಅಭ್ಯರ್ಥಿಯಾಗಿದ್ದಲ್ಲಿ ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ ಹಾಗೂ ಅಂಕಪಟ್ಟಿಯನ್ನು ಕಡ್ಡಾಯವಾಗಿ ಲಗತ್ತಿಸಿರಬೇಕು. ಅರ್ಜಿಯನ್ನು ಆಯಾ ತಾಲ್ಲೂಕಿನ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆಯಿಂದ ಅರ್ಜಿಗಳನ್ನು ಪಡೆದು ಭರ್ತಿ ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ:45 ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿಗೆ ಮೇ 21 ರೊಳಗಾಗಿ ಸಲ್ಲಿಸಲು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಬೇಬಿ ಸುನೀತ ತಿಳಿಸಿದ್ದಾರೆ.

## ಮತದಾರರ ಜಾಗೃತಿಗೆ ಚಿತ್ರಕಲಾ ಸ್ಪರ್ಧೆ

**ದಾವಣಗೆರೆ:** ಮತದಾರರ ಜಾಗೃತಿಗೆ ಏಪ್ರಿಲ್ 24 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಸಿ.ಜಿ. ಆಸ್ಪತ್ರೆ ಹತ್ತಿರ, ವಿಶ್ವೇಶ್ವರಯ್ಯ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಪ್ರಾಥಮಿಕ, ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ ವಿದ್ಯಾರ್ಥಿಗಳು ಹಾಗೂ ಚಿತ್ರಕಲಾ ಶಿಕ್ಷಕರು ಭಾಗವಹಿಸಬಹುದು.

---

**ಪ್ರಮುಖ ಸುದ್ದಿ**

#### ಜಿಲ್ಲಾ ಎಸ್ ಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಕಡವಗೆರೆ ದೇವರಾಜ್ ಹೇಳಿಕೆ

# ವಾಲ್ಮೀಕಿ ಸಮುದಾಯಕ್ಕೆ ಮೀಸಲಾತಿ ಕಲ್ಪಿಸಿದ ಕೀರ್ತಿ ಬಿಜೆಪಿಗೆ

» ಹೊಸದುರ್ಗ

ಬಡತನ ಮತ್ತು ಶಿಕ್ಷಣದಿಂದ ವಂಚಿತವಾದ ವಾಲ್ಮೀಕಿ ಸಮುದಾಯಕ್ಕೆ ಮೀಸಲಾತಿಯನ್ನು ನೀಡಿದ ಕೀರ್ತಿ ಬಿಜೆಪಿ ಸರ್ಕಾರಕ್ಕೆ ಸಲ್ಲುತ್ತದೆ ಹಾಗೂ ಬಿಜೆಪಿ ಸರ್ಕಾರದ ಆಳ್ವಿಕೆಯಲ್ಲಿ ಒಮ್ಮೆ ಎಸ್ಸಿ ಮತ್ತು ಒಮ್ಮೆ ಎಸ್ ಟಿ ಜನಾಂಗದ ವ್ಯಕ್ತಿಗಳಾದ ರಾಮನಾಥ್ ಕೋವಿಂದ್ ಹಾಗೂ ದ್ರೌಪದಿ ಮುರ್ಮು ರವರನ್ನ ರಾಷ್ಟ್ರಪತಿ ಮಾಡಿದ ಕೀರ್ತಿ ಬಿಜೆಪಿಗೆ ಸಲ್ಲುತ್ತದೆ ಎಂದು ಬಿಜೆಪಿ ಎಸ್ ಟಿ ಚಿತ್ರದುರ್ಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದೇವರಾಜ್ ಕಡವಗೆರೆ ತಿಳಿಸಿದರು.

ತಾಲೂಕಿನ ಕಸಬಾ ಹೋಬಳಿಯ ಗುತ್ತಿಕಟ್ಟೆ ದೇವಿಗೆರೆ ಹೇರೂರು ಮಾವಿನಕಟ್ಟೆ ತುಂಬಿನಕೆರೆ, ಬಿಸನಹಳ್ಳಿ ಸಾಣೆಹಳ್ಳಿ, ವಾಲ್ಮೀಕಿ ಸಮುದಾಯದ ಮನಗಳಿಗೆ ತೆರಳಿ ಮತ ಪ್ರಚಾರ ಮಾಡಿ ಮಾತನಾಡಿದ ಅವರು ಈ ದೇಶಕ್ಕೆ ಸ್ವತಂತ್ರ ತಂದ ಮಹಾನ್ ಜನಾಂಗ ಬೇಡ ಜನಾಂಗ, ಶೌರ್ಯ ಸಾಹಸಕ್ಕೆ ಹೆಸರಾದ ಈ ಸಮುದಾಯ ಸ್ವತಂತ್ರ ಬಂದಾಗಿನಿಂದಲೂ ಜನಸಂಖ್ಯೆಗೆ



ಅನುಗುಣವಾಗಿ ಮೀಸಲಾತಿ ಕೊಡದೆ ಆಳಿದ ಎಲ್ಲ ಸರ್ಕಾರಗಳು ವಂಚನೆ ಮಾಡಿದ್ದವು, ಆದರೆ ಇಂದು ಭಾರತೀಯ ಭಾರತೀಯ ಜನತಾ ಪಕ್ಷದಿಂದ ವಾಲ್ಮೀಕಿ ಜನಾಂಗದ ಮೀಸಲಾತಿಯನ್ನು ಶೇಕಡ 3% ಶೇಕಡ 7 % ಕ್ಕೆ ಹೆಚ್ಚಿಸಿದ ಕೀರ್ತಿ ಬಿಜೆಪಿಯ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ. ಇಂತಹ ಅವಕಾಶ ಕಲ್ಪಿಸಿದ ಪಕ್ಷವನ್ನ ನಾವು ಬೆಂಬಲಿಸಬೇಕಿದೆ. ಈ ಬಾರಿ ವಾಲ್ಮೀಕಿ ಸಮುದಾಯ ಹೆಚ್ಚಿನ ಸಂಖ್ಯೆಯಲ್ಲಿ ಬಿಜೆಪಿಯನ್ನು ಬೆಂಬಲಿಸಲಿದ್ದಾರೆ ಎಂದರು.

ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷೆ ಅನುಸೂಯ ಜಗನ್ನಾಥ್ ಮಾತನಾಡಿ ಮಹಿಳೆ ತನ್ನ ಬದುಕು ಕಟ್ಟಿಕೊಳ್ಳಲು ಮೇ ಇನ್ ಇಂಡಿಯಾ ಯೋಜನೆಯಡಿಯಲ್ಲಿ ಗುಡಿ ಕೈಗಾರಿಕೆಗಳಿಗೆ ಉತ್ತೇಜನ ನೀಡಿ ಪ್ರಧಾನಿ ಮೋದಿಜಿ ಅವರು ಅವಕಾಶ ಕಲ್ಪಿಸಿದ್ದಾರೆ. ಬಿಜೆಪಿ ಮಹಿಳೆಯರ ರಕ್ಷಣೆಗೆ ಹೆಚ್ಚಿನ ಮುನ್ನಡೆ ನೀಡುತ್ತದೆ. ಇತ್ತೀಚಿನ ದಿನಗಳಲ್ಲಿ ಮಹಿಳೆಯರಿಗೆ ನಿರಂತರ ಕಿರುಕುಳಗಳು ದೌರ್ಜನ್ಯಗಳು ಹೆಚ್ಚುತ್ತಿದ್ದು ನಮ್ಮ ಹೆಣ್ಣು ಮಕ್ಕಳು ಶಾಲಾ-ಕಾಲೇಜಿಗೆ ಹೋಗಲು ಭಯಪಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಮೋದಿಯವರು ಈ ದೇಶದ ಪ್ರಧಾನಿ ಆದರೆ ಮಹಿಳೆಯರು ಸ್ವಾವಲಂಬಿಗಳಾಗಿ ಬದುಕಲು ವಿಶೇಷವಾದ ಕಾನೂನನ್ನ ರೂಪಿಸುವರು ಎಂದರು.

ಪ್ರಚಾರ ಸಭೆಯಲ್ಲಿ ವಾಲ್ಮೀಕಿ ಸಮಾಜದ ಮುಖಂಡರಾದ ಆನಂದ್ ಆರ್ ಮಹಿಳಾ ಮೋರ್ಚಾ ಅಧ್ಯಕ್ಷೆ ,ಅನುಸೂಯ ಜಗನ್ನಾಥ್, ಮಹಿಳಾ ಮತ್ತು ಮಾಜಿ ಅಧ್ಯಕ್ಷರಾದ ಪಾರ್ವತಮ್ಮ, ಮಂಡಲ ಉಪಾಧ್ಯಕ್ಷರಾದ ಮಾನಸ ಬಸವರಾಜ್ . ತುಂಬಿನಕೆರೆ ,ಬೋಕಿಕೆರೆ ನಾಗರಾಜ್, ಹೇರೂರು ಮಂಜುನಾಥ್, ಪ್ರದೀಪ್ ರಾಜಪ್ಪ ತುಂಬಿನಕೆರೆ ಹಾಗೂ ವಾಲ್ಮೀಕಿ ಸಮಾಜದ ಮುಖಂಡರು ಇದ್ದರು.

## ಫಾಸ್ಟ್ ನ್ಯೂಸ್

### ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

» ದಾವಣಗೆರೆ

ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ಕಲ್ಪಿಸಲು ಅರ್ಜಿ ಆಹ್ವಾನಿಸಿದೆ. ವಿದ್ಯಾರ್ಥಿಯು 5 ನೇ ತರಗತಿಯಲ್ಲಿ ಶೇ.60% ಕ್ಕಿಂತ ಹೆಚ್ಚು ಅಂಕ ಪಡೆದು ಉತ್ತೀರ್ಣರಾಗಿರಬೇಕು. ಪೋಷಕರವಾರ್ಷಿಕವರಮಾನರೂ.2,00.000/– ಮೀರಬಾರದು. ಸಂಬಂಧಿಸಿದ ಅರ್ಜಿಯೊಂದಿಗೆ ದೃಢೀಕರಿಸಿದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಗ್ರಾಮೀಣ ಅಭ್ಯರ್ಥಿಯಾಗಿದ್ದಲ್ಲಿ ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ ಹಾಗೂ ಅಂಕಪಟ್ಟಿಯನ್ನು ಕಡ್ಡಾಯವಾಗಿ ಲಗತ್ತಿಸಿರಬೇಕು. ಅರ್ಜಿಯನ್ನು ಆಯಾ ತಾಲ್ಲೂಕಿನ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಅಥವಾ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆಯಿಂದ ಅರ್ಜಿಗಳನ್ನು ಪಡೆದು ಭರ್ತಿ ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ:45 ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿಗೆ ಮೇ 21 ರೊಳಗಾಗಿ ಸಲ್ಲಿಸಲು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಧಿಕಾರಿ ಬೇಬಿ ಸುನೀತ ತಿಳಿಸಿದ್ದಾರೆ.

### ದಾವಣಗೆರೆ: ಚುನಾವಣಾ ವಾರ್ ರೂಂ ವೀಕ್ಷಣೆ

» ದಾವಣಗೆರೆ

ಲೋಕಸಭಾ ಚುನಾವಣೆ ನಡೆಯುತ್ತಿದ್ದು ದಾವಣಗೆರೆ ಕ್ಷೇತ್ರಕ್ಕೆ ಸಾಮಾನ್ಯ ಚುನಾವಣಾ ವೀಕ್ಷಕರಾಗಿ ಐಎಎಸ್ ಅಧಿಕಾರಿ ಎಂ.ಲಕ್ಷ್ಮಿಯವರು ನೇಮಕವಾಗಿದ್ದು ಈಗಾಗಲೇ ಕ್ಷೇತ್ರದಲ್ಲಿ ಚುನಾವಣಾ ವೀಕ್ಷಣಾ ಕರ್ತವ್ಯದಲ್ಲಿ ತೊಡಗಿದ್ದಾರೆ. ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರಗಳಲ್ಲಿ ಕೈಗೊಳ್ಳಲಾಗುವ ಚಟುವಟಿಕೆಗಳ ಮೇಲ್ವಿಚಾರಣೆ ಮತ್ತು ಎಂ.ಸಿ.ಸಿಗೆ ಸಂಬಂಧಿಸಿದಂತೆ ವೀಕ್ಷಣೆಗಾಗಿ ಚುನಾವಣಾ ವಾರ್ ರೂಂ ನ್ನು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸ್ಥಾಪಿಸಲಾಗಿದೆ. ಇಲ್ಲಿ ಸಿವಿಜಿಲ್ ದೂರುಗಳ ನಿರ್ವಹಣೆ, ಸಹಾಯವಾಣಿಗೆ ಬರುವ ಕರೆಗಳ ನಿರ್ವಹಣೆ, ಚೆಕ್‌ಪೋಸ್ಟ್‌ಗಳ ನೇರ ದೃಶ್ಯಾವಳಿ ವೀಕ್ಷಣೆ, ಮಾಧ್ಯಮಗಳಲ್ಲಿ ಬರುವ ಸುದ್ದಿಗಳ ವೀಕ್ಷಣೆ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡುವವರ ಮೇಲೆ ನಿಗಾವಹಿಸಲು ವಿವಿಧ ತಂಡಗಳು ದಿನದ 24 ಗಂಟೆಗಳ ಕಾಲ ಮೂರು ಪಾಳಿಯಲ್ಲಿ ಕೆಲಸ ನಿರ್ವಹಿಸುತ್ತಿವೆ.ವೀಕ್ಷಕರಿಂದ ಪರಿಶೀಲನೆ; ಚುನಾವಣಾ ವಾರ್ ರೂಂನಲ್ಲಿ ಕೈಗೊಳ್ಳಲಾಗುತ್ತಿರುವ ಕೆಲಸಗಳು ಮತ್ತು ನಿಯಂತ್ರಣದ ಬಗ್ಗೆ ಕೈಗೊಂಡಿರುವ ಮೇಲ್ವಿಚಾರಣೆಯನ್ನು ವೀಕ್ಷಕರು ಎಲ್ಲಾ ದಾಖಲೆ ಮತ್ತು ಕಡತಗಳನ್ನು ಪರಿಶೀಲನೆ ನಡೆಸಿದರು.ವೀಕ್ಷಕರನ್ನು ಸಾರ್ವಜನಿಕರು ಸಂಪರ್ಕಿಸಬಹುದು; ಜಿಲ್ಲೆಯಲ್ಲಿ ಚುನಾವಣಾ ಸಾಮಾನ್ಯ ವೀಕ್ಷಕರು ಹಾಗೂ ವೆಚ್ಚ ವೀಕ್ಷಕರು ಜಿಲ್ಲೆಯಲ್ಲಿ ವಾಸ್ತವ್ಯ ಹೂಡಿದ್ದು ಚುನಾವಣಾ ಎಂಸಿಸಿ ಉಲ್ಲಂಘನೆ ಮತ್ತು ಚುನಾವಣೆಗೆ ಸಂಬಂಧಿಸಿದ ಯಾವುದೇ ದೂರುಗಳಿದ್ದಲ್ಲಿ ಇವರನ್ನು ಭೇಟಿ ಮಾಡಿ ಅಥವಾ ದೂರವಾಣಿಗೆ ಕರೆ ಮಾಡಿ ನೀಡಬಹುದು.ಅಥವಾ ಅವರ ಇ–ಮೇಲ್ ವಿಳಾಸಕ್ಕೆ ವಿವರದೊಂದಿಗೆ ಕಳುಹಿಸಬಹುದಾಗಿದೆ.ಸಾಮಾನ್ಯ ವೀಕ್ಷಕರು; ಎಂ.ಲಕ್ಷ್ಮಿ ಐಎಎಸ್, ಮೇಲ್ ವಿವರ; dvggeneralobserver@gmail.com ಮೊಬೈಲ್ ಸಂಖ್ಯೆ;7618745524, ವೆಚ್ಚ ವೀಕ್ಷಕರು; ಪ್ರತಿಭಾ ಸಿಂಗ್ ಐಆರ್‌ಎಸ್, ಮೇಲ್; ಜಥರಿಂಥ13ಜತರ@ರಟಚುಟ.ಛಿಂಟ, ಮೊಬೈಲ್ ಸಂಖ್ಯೆ;7795492549 ಗೆ ಸಂಪರ್ಕಿಸಬಹುದಾಗಿದೆ. ವೆಚ್ಚ ವೀಕ್ಷಕರು ವಾರ್ ರೂಂ ವೀಕ್ಷಣೆ ಮಾಡಿದಾಗ ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ, ಸ್ಮಾರ್ಟ್‌ಸಿಟಿ ಎಂ.ಡಿ ವೀರೇಶ್, ವಾರ್ ರೂಂ ನೋಡಲ್ ಅಧಿಕಾರಿ ಉದಯಕುಮಾರ್, ಮಾಧ್ಯಮ ವೀಕ್ಷಣಾ ನೋಡಲ್ ಅಧಿಕಾರಿ ಶಿವಾಜಿ, ವೀಕ್ಷಕರ ಲಯಜನ್ ಅಧಿಕಾರಿ ನಜ್ಮಾ ಉಪಸ್ಥಿತರಿದ್ದು ಮಾಹಿತಿ ನೀಡಿದರು.

### ನೇಹ ಕೊಲೆ ಖಂಡಿಸಿ ಇಂದು ಬಿಜೆಪಿ ಪ್ರತಿಭಟನೆ

» ಚಿತ್ರದುರ್ಗ

ಹುಬ್ಬಳ್ಳಿಯ ನೇಹ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾ ಭಾರತಿಯ ಜನತಾ ಪಾರ್ಟಿಯವತಿಯಿಂದ ಬೃಹತ್ ಪ್ರತಿಭಟನೆಯನ್ನು ಏ. 22ರಂದು ಹಮ್ಮಿಕೊಂಡಿರುವುದಾಗಿ ಬಿಜೆಪಿ ಜಲ್ಲಾಧ್ಯಕ್ಷ ಎ.ಮುರಳಿ ತಿಳಿಸಿದ್ದಾರೆ. ಚಿತ್ರದುರ್ಗದ ನೀಲಕಂಠೇಶ್ವರ ದೇವಾಲಯದಿಂದ ಬೆಳಿಗ್ಗೆ 11 ಗಂಟೆಗೆ ಆರಂಭವಾಗುವ ಪ್ರತಿಭಟನೆಯಲ್ಲಿ ಕೇಂದ್ರ ಸಚಿವರಾದ ಎ.ನಾರಾಯಣಸ್ವಾಮಿ, ಮಾಜಿ ಸಚಿವರಾದ ಗೋವಿಂದ ಕಾರಜೋಳ ಶಾಸಕರಾದ ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ನವೀನ್, ಎನ್, ರವಿಕುಮಾರ ಚಿದಾನಂದ ಗೌಡ, ವೈ.ಎ.ನಾರಾಯಣಸ್ವಾಮಿ, ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ,ನೇರ್ಲಗುಂಟೆತಿಪ್ಪೇಸ್ವಾಮಿ,ಎಸ್ ಲಿಂಗಮೂರ್ತಿ, ಪ್ರತಿಭಟನೆಯಲ್ಲಿ ಪಾಲ್ಗೋಳ್ಳುವರು ಜಿಲ್ಲೆಯ ಎಲ್ಲಾ ಮಂಡಲ ಅದ್ಯಕ್ಷರು ಮಂಡಲ ಪಧಾದಿಕಾರಿಗಳು ಯುವಮೊರ್ಚಾ ರೈತಮೋರ್ಚ್ ಮಹಿಳಾ ಮೊರ್ಚಾ ಎಸ್ ಮೊರ್ಚಾ ಬಿಜೆಪಿ ಕಾರ್ಯಕರ್ತರು ಅಭಿಮಾನಿಗಳು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ.

## ಪರಶುರಾಂಪುರದಲ್ಲಿ ಕಾಂಗ್ರೆಸ್ ಭರ್ಜರಿ ಶಕ್ತಿ ಪ್ರದರ್ಶನ, ಕೈಹಿಡಿಯಲಿವೆ ಐದು ಗ್ಯಾರೆಂಟಿ,

# ಗೆಲುವು ನಮ್ಮದೇ: ಶಾಸಕ ರಘುಮೂರ್ತಿ

» ನಮ್ಮ ಜನ ಸಮಾಚಾರ

ಚಳ್ಳಕೆರೆ: ಕಾಂಗ್ರೆಸ್ ಗ್ಯಾರೆಂಟಿ ಯೋಜನೆಗಳು ಮತ್ತು ಚಳ್ಳಕೆರೆ ಕ್ಷೇತ್ರದಲ್ಲಿ ಮಾಡಿರುವ ಅಭಿವೃದ್ಧಿ ಕಾರ್ಯಗಳನ್ನು ಜನರಿಗೆ ತಿಳಿಸುವ ಮೂಲಕ ಬಿ.ಎನ್.ಚಂದ್ರಪ್ಪ ಅವರಿಗೆ ಹೆಚ್ಚಿನ ಮತಗಳಿಂದ ಗೆಲ್ಲಿಸಿಕೊಳ್ಳುತ್ತೇನೆ ಎಂದು ಶಾಸಕ ಟಿ.ರಘುಮೂರ್ತಿ ವಿಶ್ವಾಸ ವ್ಯಕ್ತಪಡಿಸಿದರು.

ಅವರು ಶನಿವಾರ ಪರಶುರಾಮಪುರ ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷ ಹಮ್ಮಿಕೊಂಡಿದ್ದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಪರ ಚುನಾವಣಾ ಪ್ರಚಾರಸಭೆಯಲ್ಲಿ ಮಾತನಾಡಿದರು.

ಪರಶುರಾಂಪುರ ಹೋಬಳಿಯು ನನಗೆ ಅತಿ ಹೆಚ್ಚಿನ ಬೆಂಬಲವನ್ನು ನೀಡುತ್ತ ಬಂದಿದ್ದು ಅವರಿಗೆ ಸದಾ ಬೆಂಬಲ ನೀಡಿಕೊಂಡು ಹಂತ ಹಂತವಾಗಿ ಎಲ್ಲಾ ಕೆಲಸ ಕಾರ್ಯಗಳನ್ನು ಮಾಡಿಕೊಂಡು ಬರುತ್ತಿದ್ದೇನೆ. ಈ ಬಾರಿ ಅತಿ ಹೆಚ್ಚು ಲೀಡ್ ನೀಡುವ ಎಲ್ಲಾ ಲಕ್ಷಣ ಕಾಣುತ್ತಿದೆ.ನಮ್ಮ ಪಕ್ಷ ನಡೆದಂತೆ ನುಡಿಯುವ ಸರ್ಕಾರವಾಗಿದೆ. ಚುನಾವಣೆ ಸಂದರ್ಭದಲ್ಲಿ ನೀಡಿದ ಐದು ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ಜನರ ಕಲ್ಯಾಣಕ್ಕೆ ಮುಂದಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ನುಡಿದಂತೆ ನಡೆಯುತ್ತಿದೆ. ಸಾಮಾನ್ಯ, ರೈತರ ಪರವಾದ ಆಡಳಿತ ನಡೆಸುವ ಮೂಲಕ ಜನಸಾಮಾನ್ಯರ ಏಳಿಗೆ ಕಾರಣವಾಗಿದೆ. ಮುಂದಿನ ದಿನಗಳಲ್ಲೂ ಸಹ ಕೇಂದ್ರದಲ್ಲಿ ನಮ್ಮ ಸರ್ಕಾರ ಆಡಳಿತಕ್ಕೆ ಬಂದರೆ ಹಲವಾರು ಯೋಜನೆಗಳನ್ನು ಜಾರಿಗೆ ತರಲಾಗುವುದು. ಬಡವರ ಪರವಾಗಿ ಕಾರ್ಯನಿರ್ವಹಿಸುವ ಪಕ್ಷ ಎಂದರೆ ಕಾಂಗ್ರೆಸ್, ಸುಳ್ಳು ಆಶ್ವಾಸನೆಗಳನ್ನು ನೀಡುವ ಪಕ್ಷ ನಮ್ಮದಲ್ಲ, ಸಾಮಾನ್ಯ ವರ್ಗದ ಕಲ್ಯಾಣಕ್ಕಾಗಿ ಹಲವಾರು ಯೋಜನೆಗಳನ್ನು ರೂಪಿಸಿದೆ ಎಂದರು. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಅತಿದೊಡ್ಡ ವಿಸ್ತಾರವಾದ ಹೋಬಳಿ ಕೇಂದ್ರವಾದ ಪರಶುರಾಂಪುರದಲ್ಲಿ ಸಭೆ ಆಯೋಜಿಸಿರುವುದು ಸಂತಸ ತಂದಿದೆ. ಸುಮಾರು ಗಂಟೆಗಳ ಕಾಲ ತಾವು ಕಾದು ಪಕ್ಷದ ಅಭ್ಯರ್ಥಿ ಹಾಗೂ ಮುಖಂಡರ ಮಾರ್ಗದರ್ಶನ ಪಡೆಯಲು ಬಂದಿದ್ದೀರಿ, ತಾವುಗಳು ತಮ್ಮ ಬೂತನಲ್ಲಿ ಲೀಡ್ ಕೊಡಿಸಬೇಕು. ಈ ಬಾರಿಯ ಚುನಾವಣೆಯ ಫಲಿತಾಂಶ ಕಾಂಗ್ರೆಸ್ ಪಕ್ಷದ ಪರವಾಗಿ ಇರಲಿದೆ. ಚಂದ್ರಪ್ಪ ಗೆಲುವು ಸಾಧಿಸಿದ ಕೂಡಲೇ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿ ಜೊತೆಯಾಗಿ ಶ್ರಮಿಸುತ್ತೇವೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಪ್ರಚಾರ ಸಭೆಯಲ್ಲಿ ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಚನ್ನಕೇಶವ, ಸೋಮಶೇಖರ್, ಸಿ.ವೀರಭದ್ರಬಾಬು, ಟಿ.ಪ್ರಭುದೇವ್ ಮುಂತಾದವರು ಉಪಸ್ಥಿತರಿದ್ದರು.






### ಚಂದ್ರಪ್ಪ ಗೆಲುವು ಸಾಧಿಸುವುದರಲ್ಲಿ ಅನುಮಾನವಿಲ್ಲ: ಡಿ.ಸುಧಾಕರ್



ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಪ್ರಸ್ತುತ 2024ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಗೆಲುವು ಸಾಧಿಸುವುದರಲ್ಲಿ ಯಾವುದೇ ಅನುಮಾವಿಲ್ಲ. ಕಾರಣ, ಪ್ರಸ್ತುತ ರಾಜ್ಯ ಸರ್ಕಾರ ರಾಜ್ಯದ ಬಡ ಜನತೆಗಾಗಿ ರೂಪಿಸಿದ ಐದು ಗ್ಯಾರಂಟಿಗಳು ಜಾರಿಯಾಗಿದ್ದು, ಕಾಂಗ್ರೆಸ್ ಆಡಳಿತದಲ್ಲಿ ಜನರು ನೆಮ್ಮದಿ ಬದುಕು ಕಂಡುಕೊಂಡಿದ್ದಾರೆ. ಈಗಾಗಲೇ ಮತದಾರರು ಕಾಂಗ್ರೆಸ್ ಪಕ್ಷದ ಪರವಾಗಿ ತಮ್ಮ ಮತ ಚಲಾಯಿಸಲು ಸಿದ್ದರಿದ್ದಾರೆಂದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ತಿಳಿಸಿದರು.ಈ ಸಭೆಯಲ್ಲಿ ನಿರೀಕ್ಷೆಗೂ ಮೀರಿದ ಹೆಚ್ಚಿನ ಜನರು ಜಮಾಯಿಸಿದ್ದಾರೆ. ನಿಮ್ಮಲ್ಲಿರುವ ಉತ್ಸಾಹ ಕಂಡರೆ ನನಗೆ ಈ ಬಾರಿ ಚಂದ್ರಪ್ಪ ಬಹುಮತಗಳಿಂದ ಗೆಲುವು ಹೆಚ್ಚು ಸುಲಭವಾಗಲಿದೆ. ಕಾಂಗ್ರೆಸ್ ಪಕ್ಷದ ಪರವಾಗಿ ತಾವೆಲ್ಲರೂ ಮತ ಚಲಾಯಿಸಬೇಕೆಂದರು ಎಂದು ಹೇಳಿದರು.

### ಈ ಬಾರಿ ಗೆಲುಬವು ನನ್ನದೇ: ಚಂದ್ರಪ್ಪ



ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ನಾನು ಮೂರನೇ ಬಾರಿಗೆ ಸ್ಪರ್ಧಿಸುತ್ತಿದ್ದೇನೆ. ನನಗೆ ಈಗಾಗಲೇ ಒಮ್ಮೆ ಗೆಲ್ಲಿಸಿ ಆಶೀರ್ವಾದ ಮಾಡಿದ್ದೀರಿ, ಮತ್ತೊಮ್ಮೆ ನಿಮ್ಮ ಸೇವೆ ಮಾಡುವ ಹಿತದೃಷ್ಟಿಯಿಂದ ಪಕ್ಷದ ಹೈಕಮಾಂಡ್ ನಿರ್ಧಾರ ಜಿಲ್ಲೆಯ ಎಲ್ಲಾ ಶಾಸಕರ ಸಹಕಾರದಿಂದ ಚುನಾವಣೆಗೆ ಸ್ಪರ್ಧಿಸಿದ್ದೇನೆ. ಈ ಬಾರಿ ನಿಮ್ಮೆಲ್ಲರ ವಿಶ್ವಾಸದಿಂದ ಗೆಲುವು ನನ್ನದೆ ಎಂಬ ವಿಶ್ವಾಸವಿದೆ ಎಂದು ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ತಿಳಿಸಿದರು

### ಎಚ್‌ಡಿಕೆ ಸಭೆಗಿಂತ ಡಬಲ್ ಜನರನ್ನು ಸೇರಿಸಿದ ರಘುಮೂರ್ತಿ



ಒಂದು ದಿನ ಮುಂಚಿತವಾಗಿ ದಳಪತಿ ಮಾಜಿ ಸಿಎಂ ಕುಮಾರಸ್ವಾಮಿ ಅವರನ್ನು ಕರೆಸಿ ಶಕ್ತಿ ಪ್ರದರ್ಶನಕ್ಕೆ ಮುಂದಾಗಿದ್ದ ಕಳಪತಿಗೆ ಏಕೋ ಜೆಡಿಎಸ್ ಬಿಜೆಪಿ ಎರಡು ಪಕ್ಷದ ಕಾರ್ಯಕರ್ತರು ಮತ್ತು ನಾಯಕರು ಸೇರಿದರು ಸಹ ಜನ ಸೇರಿಸುವಲ್ಲಿ ವಿಫಲವಾದಂತೆ ಕಾಣುತ್ತಿತ್ತು. ಆದರೆ ಜೆಡಿಎಸ್ ಮೂಲ ನೆಲೆಯಿದ್ದರು ಇದ್ದ ಕಡೆ ಹೆಚ್ಚು ಜನರು ಸೇರಿತ್ತಾರೆ ಎಂಬ ಪ್ಲಾನ್ ನಲ್ಲಿ ಕರೆಸಿದರು ಸಹ ವಿಧಾನಸಭೆಯಲ್ಲಿ ರಘುಮೂರ್ತಿ ಪರ ಮತ ಚಲಾಯಿಸಿದ್ದ ಜನರು ಈ ಬಾರಿ ಸಹ ರಘುಮೂರ್ತಿ ಬೆನ್ನಿಗೆ ನಿಲ್ಲುವ ಎಲ್ಲಾ ಲಕ್ಷಣ ಕಂಡಿದ್ದು ಪರಶುರಾಂಪುರ ಹೋಬಳಿ ಮಟ್ಟದ ಪ್ರಚಾರ ಸಭೆಯಲ್ಲಿ ಸುಮಾರು 8 ರಿಂದ 9 ಸಾವಿರ ಜನ ಸಮೂಹ ಸೇರಿ ಬೆಂಬಲ ವ್ಯಕ್ತಪಡಿಸಿದ್ದು ಈಗ ದಳದ ಕೋಟೆ ರಘುಮೂರ್ತಿ ಲಗ್ಗೆ ಇಟ್ಟಿದ್ದಾರೆ.

# ರಾಜ್ಯ ಗೋರಮಳಾವು ಸಂಘದಿಂದ ಬೆಜೆಪಿಗೆ ಬೆಂಬಲ ಘೋಷಣೆ: ಜಯಸಿಂಹ ಖಟ್ರೋತ್

» ಹೊಳಲ್ಕೆರೆ

ಬಿಜೆಪಿ ಪಕ್ಷದ ರಾಜ್ಯದ ಲಂಬಾಣಿ ಸಮುದಾಯಕ್ಕೆ ಸಾಮಾಜಿಕ ನ್ಯಾಯ ಕಲ್ಪಿಸಿದ ಹಿನ್ನಲೆಯಲ್ಲಿ ರಾಷ್ಟ್ರೀಯ ಗೋರಮಳಾವು ರಾಜ್ಯ ಸಮಿತಿ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಕ್ಷೇತ್ರದಲ್ಲಿ ಬಿಜೆಪಿ ಪಕ್ಷವನ್ನು ಬೆಂಬಲಿಸಲಿದೆ ಎಂದು ರಾಜ್ಯ ಗೋರಮಳಾವು ಸಮಿತಿ ಕಾರ್ಯಧ್ಯಕ್ಷ ಜಯಸಿಂಹಖಟ್ರೋತ್ ತಿಳಿಸಿದ್ದಾರೆ.

ಅವರು ಪಟ್ಟಣದ ಸ್ನೇಹ ಕಂಪರ್ಟನಲ್ಲಿ ಶನಿವಾರ ರಾಷ್ಟ್ರೀಯ ಗೋರಮಳಾವು ರಾಜ್ಯ ಸಮಿತಿ ಸಭೆ ಹಾಗೂ ಲಂಬಾಣಿ ಸಮುದಾಯ ಸಭೆ ನಡೆಸಿ ಮಾತನಾಡಿದರು.

ಬಿಜೆಪಿ ಪಕ್ಷದ ಸಾಮಾಜೀಕ ನ್ಯಾಯಾದಡಿ ನಮ್ಮ ಸಮುದಾಯಕ್ಕೆ ವಿಧಾನ ಸಭಾ ಹಾಗೂ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಅವಕಾಶ ನೀಡಿದೆ. ಜತೆಗೆ ತಾಂಡಗಳ ಅಭಿವೃದ್ಧಿಗೆ ನಿಗಮ ಸ್ಥಾಪಿಸಿ ಸಂವಿಧಾನ ಬದ್ದ ಹಕ್ಕುಗಳನ್ನು ಕಲ್ಪಿಸಿಕೊಟ್ಟಿದೆ. ತಾಂಡಗಳಲ್ಲಿ ನಡೆಯುವ ಮತಾಂತರ ಹತ್ತಿಕ್ಕುವ ನಿಟ್ಟಿನಲ್ಲಿ ಬಿಜೆಪಿ ಕ್ರಮ ಕೈಗೊಂಡಿದೆ. ಲಂಬಾಣಿ ಸಮುದಾಯವನ್ನು ಸಮಾಜ ಮುಖ್ಯವಾಹಿನಿಗೆ ತರಲು ಸರಕಾರ ಸಾಕಷ್ಟು ಸೌಲಭ್ಯಗಳನ್ನು ಕಲ್ಪಿಸಿದೆ ಎಂದರು.

ಈ ನಿಟ್ಟಿನಲ್ಲಿ ರಾಜ್ಯ ಗೋರಮಳಾವು ಸಮಿತಿ ಈ ಭಾರಿ ಬಿಜೆಪಿ ಪಕ್ಷವನ್ನು ಬೆಂಬಲಿಸಬೇಕೆಂದು ತಿರ್ಮಾನಿಸಿದೆ. ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಪಕ್ಷಕ್ಕೆ ಬೆಂಬಲ ನೀಡಿ ಮೋದಿ ನೇತೃತ್ವದ ಕೇಂದ್ರ ಸರಕಾರವನ್ನು ಅಧಿಕಾರಕ್ಕೆ ಬರಲು ಅವಕಾಶ ನೀಡಬೇಕು. ಈನಿಟ್ಟಿನಲ್ಲಿ ಚಿತ್ರದುರ್ಗ ಲೋಕಸಭಾ ಚುನಾವಣೆಯಲ್ಲಿ ಜಿಲ್ಲೆಯಲ್ಲಿರುವ ಎಲ್ಲಾ ತಾಂಡಗಳಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿ ಪರ ಮತ ನೀಡಲು ಪ್ರಚಾರ ಕೈಗೊಳ್ಳಲಾಗುತ್ತದೆ. ಗೋವಿಂದ ಕಾರಜೋಳರನ್ನು ಬೆಂಬಲಿಸಲು ಲಂಬಾಣಿ ಸಮುದಾಯ ಮುಂದಾಗಬೇಕೆಂದು ತಿಳಿಸಿದರು.

ರಾಷ್ಟ್ರೀಯ ಕಾರ್ಯದರ್ಶಿ ಮಲ್ಲೇಶ್ ನಾಯ್ಕ, ಪುರಸಭೆ ಸದಸ್ಯರಾದ ಸವಿತನರಸಿಂಹ ಖಟ್ರೋತ್, ಮಮತಜಯಸಿಂಹ, ತಾಲೂಕು ಪಂಚಾಯ್ತಿ ಮಾಜಿ ಅಧ್ಯಕ್ಷೆ ಸುಜಾತ ಧನಂಜಯ ಸೇರಿದಂತೆ ಹಲವಾರು ಮುಖಂಡರು ಪಾಲ್ಗೊಂಡಿದ್ದರು.



# ಕಾಡುಗೊಲ್ಲರನ್ನು ಎಸ್ಟಿಗೆ ಸೇರಿಸದ ಬಿಜೆಪಿ ವಿರುದ್ದ ಮತಚಲಾಯಿಸಲು ಕರೆ




» ಚಿತ್ರದುರ್ಗ

ಕಾಡುಗೊಲ್ಲರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವುದಾಗಿ ಹಸಿ ಸುಳ್ಳುಗಳನ್ನು ಹೇಳಿಕೊಂಡು ಬರುತ್ತಿರುವ ಬಿಜೆಪಿ. ಪಕ್ಷವನ್ನು ಈ ಚುನಾವಣೆಯಲ್ಲಿ ಸೋಲಿಸಿ ಕಾಂಗ್ರೆಸ್‌ಗೆ ಬೆಂಬಲಿಸುವುದಾಗಿ ಕರ್ನಾಟಕ ರಾಜ್ಯ ಕಾಡುಗೊಲ್ಲ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಡಿ.ದೊಡ್ಡಮಲ್ಲಯ್ಯ ತಿಳಿಸಿದರು.ಪತ್ರಕರ್ತರ ಭವನದಲ್ಲಿ ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಭಾರತ ಅತ್ಯಂತ ಪುರಾತನ ಪ್ರಜಾಪ್ರಭುತ್ವ ದೇಶ. ಇದಕ್ಕೆ ಭದ್ರ ಬುನಾದಿ ಹಾಕಿದ್ದು, ಕಾಂಗ್ರೆಸ್. ಧರ್ಮ ಸಹಿಷ್ಣುತೆ, ಜಾತ್ಯಾತೀತತೆ ಈ ನೆಲದ ಗುಣ. ಕಾಂಗ್ರೆಸ್ ಸರ್ಕಾರ ಆರಂಭದಿಂದಲೂ ಕಾಡುಗೊಲ್ಲರನ್ನು ಬೆಂಬಲಿಸುತ್ತ ಬರುತ್ತಿರುವುದರಿಂದ ಈ ಬಾರಿಯ ಪಾರ್ಲಿಮೆಂಟ್ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಓಟು ನೀಡುವುದಾಗಿ ಹೇಳಿದರು.ಸಿದ್ದರಾಮಯ್ಯನವರು 2013 ರಲ್ಲಿ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಕಾಡುಗೊಲ್ಲರನ್ನು ಗುರುತಿಸಿ ಅಧಿಕಾರ ನೀಡಿದರು. ಎ.ವಿ.ಉಮಾಪತಿ ಶಾಸಕರ ಾದರು. ಜಯಮ್ಮ ಬಾಲರಾಜ್‌ರವರನ್ನು ವಿಧಾನಪರಿಷತ್ ಸದಸ್ಯರನ್ನಾಗಿ ನೇಮಕ ಮಾಡಲಾಯಿತು.

## ಪ್ರಮುಖ ಸುದ್ದಿ

# ಚಳ್ಳಕೆರೆ ಕ್ಷೇತ್ರದಲ್ಲಿ ಬಿಜೆಪಿಗೆ ಉತ್ತಮ ವಾತವರಣ: ಕೆಟಿಕೆ

» ಚಳ್ಳಕೆರೆ

ಕ್ಷೇತ್ರದಲ್ಲಿ ನಡೆದ ಎಲ್ಲಾ ಅಭಿವೃದ್ಧಿಗೆ ಮಾಜಿ ಶಾಸಕ ತಿಪ್ಪೇಸ್ವಾಮಿ ಹಾಗೂ ಜಿ.ಬಸವರಾಜ ಮಂಡಿಮಠ ಶಾಸಕರಾಗಿದ್ದ ಸಂದರ್ಭದಲ್ಲಿ ಅಭಿವೃದ್ಧಿ ಮಾಡಿದ್ದು ಪ್ರಸ್ತುತ ಶಾಸಕರು ಅವುಗಳನ್ನು ನಾನು ಮಾಡಿದೆ ಎಂದು ಹೇಳಿಕೊಳ್ಳುವುದು ಎಷ್ಟು ಸರಿ. ಈ ಬಗ್ಗೆ ಬಹಿರಂಗ ಚರ್ಚೆಗೆ ನಾನು ಸಿದ್ದವೆಂದು ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ ಹರಿಹಾಯ್ದರು.

ಅವರು, ನಗರದ ಖಾಸಗಿ ಕಚೇರಿಯಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಮಾಜಿ ಶಾಸಕ ಜಿ.ಬಸವರಾಜ ಮಂಡಿಮಠ ಅವರು ಶಾಸಕರಾದ ಸಂದರ್ಭದಲ್ಲಿ ಬಡವರು, ನಿರ್ಗತಿಕರಿಗೆ ಹಲವಾರು ಬಗರ್‌ಹುಕ್ಕುಂನಲ್ಲಿ ಜಮೀನು, ನಿವೇಶನಗಳನ್ನು ನೀಡಿ ಬಡವರಿಗೆ ಆಸರೆಯಾಗಿದ್ದರು.



ಆದರೆ, ಪ್ರಸ್ತುತ ಶಾಸಕರು 5300 ನಿವೇಶನಗಳಿದ್ದರೂ ಅವುಗಳನ್ನು ವಿಂಗಡಣೆ ಮಾಡದೆ, ಉಪಯೋಗಕ್ಕೆ ಬಾರದ ಜಿ+2 ಮನೆಗಳನ್ನು ನಿರ್ಮಿಸಿಕೊಡಲು ಹೋರಟಿದ್ದಾರೆ. ಶಾಸಕರು ಕ್ಷೇತ್ರದಲ್ಲಿ ಮಾಡಿರುವ ಹಲವಾರು ಅಭಿವೃದ್ಧಿ ಕಾರ್ಯ ಮಾಡಿದ್ದೇನೆಂದು ಹೇಳಿಕೊಂಡು ಓಡಾಡುತ್ತಾರೆ. ಆದರೆ, ಅವುಗಳಿಗೆ ಅಡಿಪಾಯ ಹಾಕಿದ್ದು ಯಾರು ಎಂದು ಮೊದಲು ತಿಳಿದುಕೊಳ್ಳಿ ಎಂದರು.

ಬಿಜೆಪಿ ಮುಖಂಡ ಅನಿಲ್ ಕುಮಾರ್ ಮಾತನಾಡಿ, ಶಾಸಕರು ಮೂರು ಬಾರಿ ಗೆದ್ದರೂ ಕ್ಷೇತ್ರದ ಅಭಿವೃದ್ಧಿ ಮಾತ್ರ ಶೂನ್ಯವಾಗಿದೆ. ಕೇವಲ ಪ್ರಮುಖ ರಸ್ತೆಗಳಲ್ಲಿ ಕಟ್ಟಡ ನಿರ್ಮಿಸಿ, ರಸ್ತೆಗಳಿಗೆ ಟಾರ್ ಹಾಕಿದರೆ ಅಭಿವೃದ್ಧಿ ಅಲ್ಲ ಕ್ಷೇತ್ರದ ಒಳಗೆ ಹೋಗಿ ನೋಡಲಿ. ಇದನ್ನು ಮತದಾರರು ಗಮನಿಸುತ್ತಿದ್ದಾರೆ ಈ ಲೋಕಸಭಾ ಚುನಾವಣೆ ತಕ್ಕ ಪಾಠಕಲಿಸಲಿದ್ದಾರೆ. ನಮ್ಮ ಅಭ್ಯರ್ಥಿ ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ 30ರಿಂದ40 ಸಾವಿರ ಲೀಡ್ ಪಡೆಯುವರು ಎಂದರು.

ಜೆಡಿಎಸ್ ಪರಾಜಿತ ಅಭ್ಯರ್ಥಿ ರವೀಶ್ ಮಾತನಾಡಿ ಚಿತ್ರದುರ್ಗ ಲೋಕಸಭಾ ಚುನಾವಣೆಯಲ್ಲಿ ಜೆಡಿಎಸ್, ಬಿಜೆಪಿ ಮೈತ್ರಿ ಕೂಟದ ಅಭ್ಯರ್ಥಿ ಗೆಲುವಿಗಾಗಿ ಎರಡೂ ಪಕ್ಷದ ಎಲ್ಲಾ ಹಂತದ ಮುಖಂಡರು, ಕಾರ್ಯಕರ್ತರು, ಅಭಿಮಾನಿಗಳು ಪ್ರಚಾರ ಕಾರ್ಯದಲ್ಲಿ ನಿರತರಾಗಿದ್ದು, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಅಭ್ಯರ್ಥಿ ಗೋವಿಂದ ಎಂ.ಕಾರಜೋಳ ಗೆಲುವಿಗೆ ಉತ್ತಮ ವಾತಾವರಣವಿದೆ ಎಂದು ಜೆಡಿಎಸ್ ಯುವ ಮುಖಂಡ ಎಂ.ರವೀಶ್ ಹೇಳಿದರು. ಬಿಜೆಪಿ ಮುಖಂಡರಾದ ಡಿ.ಸೋಮಶೇಖರಮಂಡಿಮಠ, .ಎಸ್. ಜಯರಾಮ್, ಜಯಪಾಲಯ್ಯ, ಎಸ್.ಜಯಣ್ಣ, ಬಿ.ಎಸ್.ಶಿವಪುತ್ರಪ್ಪ, ಸಿ.ಎಸ್.ಪ್ರಸಾದ್, ವಿ.ವೈ.ಪ್ರಮೋದ್, ಸಿ.ಶ್ರೀನಿವಾಸ್ ಮುಂತಾದವರು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T